ಸಂಪುಟ : 9 ಸಂಚಿಕೆ 91 ಪುಟ : 4 ಬೆಲೆ: 3.00 ಶನಿವಾರ ಮೇ 11 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 91 Pages : 4 Price : 3.00 Saturday May 11 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಶ್ರೀ ಶಂಕರಾಚಾರ್ಯರ ಜಯಂತಿ ನಾಳೆ



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಸಂಭಾಪೂರ ರಸ್ತೆಯ ಕೇಶವ ಪಾರ್ಕ್‌ನಲ್ಲಿರುವ ಶ್ರೀ ಶಂಕರಮಠದಲ್ಲಿ ಮೇ. 12ರಂದು ಶ್ರೀಮದ್ ಜಗದ್ಗುರು ಆದಿ ಶಂಕರಾಚಾರ್ಯರ ಜಯಂತಿ ಹಾಗೂ ಶ್ರೀ ಶಂಕರಮಠದ ದ್ವಿತೀಯ ವಾರ್ಷಿಕೋತ್ಸವ ನೆರವೇರಲಿದೆ.

ಬೆಳಿಗ್ಗೆ 7 ಗಂಟೆಗೆ ಶ್ರೀ ಶಂಕರಾಚಾರ್ಯರ ಪ್ರಾತಃಸ್ಮರಣೆ, 8 ಗಂಟೆಗೆ ರುದ್ರಾಭಿಷೇಕ, 9 ಗಂಟೆಗೆ ಗದಗ-ಬೆಟಗೇರಿಯ ವಿವಿಧ ಭಜನಾ ಮಂಡಳಿಗಳಿಂದ ಲಲಿತಾ ಸಹಸ್ರನಾಮ ಹಾಗೂ ಶಾಂಕರ ಸ್ತೋತ್ರ ಪಠಣ, 10 ಗಂಟೆಗೆ ಪ್ರೊ.ಅನಿಲ ವೈದ್ಯ ಇವರಿಂದ ಪ್ರವಚನ, 11 ಗಂಟೆಗೆ ಶ್ರೀ ಮಹಾಲಕ್ಷ್ಮೀ ಭಜನಾ ಮಂಡಳಿ ಇವರಿಂದ ಶ್ರೀ ಬಾಲಶಂಕರ ರೂಪಕ, ಮದ್ಯಾಹ್ನ 12 ಗಂಟೆಗೆ ಶ್ರೀಶಂಕರರ ಜನ್ಮೋತ್ಸವ ಹಾಗೂ ತೊಟ್ಟಿಲು ಸೇವೆ, ಮಧ್ಯಾಹ್ನ 12.30 ಗಂಟೆಗೆ ಮಹಾಮಂಗಳಾರತಿ-ಮಹಾಪ್ರಸಾದ, ಸಾಯಂಕಾಲ 5 ಗಂಟೆಗೆ ಭಗವದ್ಗೀತಾ ಶಿಬಿರದ ಸಮಾರೋಪ ಸಮಾರಂಭ, ಸಾಯಂಕಾಲ 6.30 ಗಂಟೆಗೆ ಶಾಂಕರ ಸ್ತೋತ್ರ ಪಠಣ, 7 ಗಂಟೆಗೆ ಮಂತ್ರಪುಷ್ಪ ಅಷ್ಟಾವಧಾನ ಸೇವಾ ಕಾರ್ಯಕ್ರಮಗಳು ನೆರವೇರುವವು.

ಸಮಸ್ತ ಸದ್ಭಕ್ತರಿಗೆ ಶ್ರೀ ಶಂಕರಮಠ ಸೇವಾ ಸಮಿತಿಯ ಪದಾಧಿಕಾರಿಗಳು ಹಾಗೂ ಸರ್ವ ಸದಸ್ಯರು ಸ್ವಾಗತ ಕೋರಿದ್ದಾರೆ.

## ಬಸವಜಯಂತಿ, ಪ್ರತಿಭಾ ಪುರಸ್ಕಾರ ನಾಳೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಸವಣೂರ ರಸ್ತೆಗೆ ಹೊಂದಿಕೊಂಡಿರುವ ಬಿಸಿಎನ್ ಪಾಲಿಟೆಕ್ನಿಕ್ ಕಾಲೇಜು ಸಭಾಭವನದಲ್ಲಿ ಮೇ 12ರ ಬೆಳಿಗ್ಗೆ 10ಕ್ಕೆ ಬಣಜಿಗ ಸಮಾಜದಿಂದ ಬಸವ ಜಯಂತಿ, ಪ್ರತಿಭಾ ಪುರಸ್ಕಾರ ಹಾಗೂ ಸಾಧಕರಿಗೆ ಸನ್ಮಾನ ಸಮಾರಂಭ ಹಮ್ಮಿಕೊಳ್ಳಲಾಗಿದೆ.

ಹೂವಿನಶಿಗ್ಲಿ ಮಠದ ಶ್ರೀ ಚನ್ನವೀರ ಮಹಾಸ್ವಾಮಿಗಳು ಕಾರ್ಯಕ್ರಮದ ಸಾನ್ನಿಧ್ಯ ವಹಿಸಲಿದ್ದು, ಸಭೆಯ ಅಧ್ಯಕ್ಷತೆಯನ್ನು ಬಣಜಿಗ ಕ್ಷೇಮಾಭಿವೃದ್ಧಿ ಟ್ರಸ್ಟ್‌ನ ಅಧ್ಯಕ್ಷ ವಿಜಯಕುಮಾರ ಹತ್ತಿಕಾಳ ವಹಿಸಲಿದ್ದಾರೆ. ಶಿಕ್ಷಕರಾದ ಸಿದ್ದಲಿಂಗೇಶ ಹಲಸೂರ ಉಪನ್ಯಾಸ ನೀಡುವರು. ಅತಿಥಿಗಳಾಗಿ ಸಿ.ಎಫ್. ಬೂದಿಹಾಳ, ಶಕುಂತಲಾ ವಡಕಣ್ಣವರ, ಲೋಹಿತ ನೆಲವಿಗಿ, ರತ್ನಾ ಕರ್ಕಿ ಮತ್ತಿತರರು ಉಪಸ್ಥಿತರಿರುವರು.

ಸಮಾರಂಭದಲ್ಲಿ ಲಕ್ಷ್ಮೇಶ್ವರ ತಾಲೂಕು ಬಣಜಿಗ ಕ್ಷೇಮಾಭಿವೃದ್ಧಿ ಟ್ರಸ್ಟ್ ವತಿಯಿಂದ ಪ್ರಸಕ್ತ ಸಾಲಿನಲ್ಲಿ ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ.90ರಷ್ಟು ಅಂಕ ಗಳಿಸಿದ ಬಣಜಿಗ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗೌರವಿಸಲಾಗುವದು. ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ.90ರಷ್ಟು ಅಂಕ ಗಳಿಸಿದ ಬಣಜಿಗ ಸಮಾಜದ ವಿದ್ಯಾರ್ಥಿಗಳು ತಮ್ಮ ಹೆಸರುಗಳನ್ನು ನೋಂದಾಯಿಸಿಕೊಳ್ಳಬೇಕು ಎಂದು ಟ್ರಸ್ಟ್‌ನ ಉಪಾಧ್ಯಕ್ಷ ಲೋಹಿತ ನೆಲವಗಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ನಿರ್ಮಲಾ ಅರಳಿ-9071095859, ಎಸ್.ಬಿ. ಕೊಣ್ಣೂರ-7996239806 ಇವರನ್ನು ಸಂಪರ್ಕಿಸಲು ಕೋರಲಾಗಿದೆ.

## ದತ್ತಿ ಉಪನ್ಯಾಸ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಗದಗ ವತಿಯಿಂದ ದಿ. ಚನ್ನವೀರಶಾಸ್ತ್ರಿ ವೀರಯ್ಯ ಹಿಡ್ಕಿಮಠ ದತ್ತಿ ಉಪನ್ಯಾಸ ಕಾರ್ಯಕ್ರಮವು ಮೇ. 11ರ ಬೆಳಿಗ್ಗೆ 11 ಗಂಟೆಗೆ ಹಾತಲಗೇರಿ ರಸ್ತೆಯ ಪಿಪಿಜಿ ಶಿಕ್ಷಣ ಮಹಾವಿದ್ಯಾಲಯದಲ್ಲಿ ಜರುಗಲಿದೆ.

ಚನ್ನವೀರಶಾಸ್ತ್ರಿ ವೀರಯ್ಯ ಹಿಡ್ಕಿಮಠರ ಜೀವನ ಮತ್ತು ಸಾಧನೆ ಕುರಿತು ನಾಡಿನ ಹೆಸರಾಂತ ಕಥಾ ಕೀರ್ತನಕಾರರಾದ ವೇ. ಪಂ.ಎಂ. ಕಲ್ಲಿನಾಥ ಶಾಸ್ತ್ರಿ ಅಡ್ನೂರ ಉಪನ್ಯಾಸ ನೀಡುವರು. ಪಂಚಾಯಕ್ಷರಯ್ಯ ಹಿಡ್ಕಿಮಠ ಹಾಗೂ ಪಿ.ಪಿ.ಜಿ. ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯ ವೀರೇಶ ಹಿತ್ತಲಮನಿ ಅತಿಥಿಗಳಾಗಿ ಭಾಗವಹಿಸುವರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ವಹಿಸುವರು.

ಕಾರ್ಯಕ್ರಮಕ್ಕೆ ಕಸಾಪ ಆಜೀವ ಸದಸ್ಯರು, ಸಾಹಿತ್ಯಾಭಿಮಾನಿಗಳು ಆಗಮಿಸಬೇಕೆಂದು ಕಾರ್ಯದರ್ಶಿ ಶಿವಾನಂದ ಗಿಡ್ನಂದಿ, ಕಿಶೋರಬಾಬು ನಾಗರಕಟ್ಟಿ, ಸಂಚಾಲಕರಾದ ಡಾ. ದತ್ತಪ್ರಸನ್ನ ಪಾಟೀಲ, ಶ್ರೀಕಾಂತ ಬಡ್ಡೂರ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

### ಮರೀಚಿಕೆಯಾದ ಜೀವಜಲ | 20 ದಿನಗಳಿಂದ ಅವಳಿ ನಗರಕ್ಕೆ ನೀರಿಲ್ಲ

# ಜನತೆಯ ಜೀವ ಹಿಂಡುತ್ತಿದೆ ಜಲಕ್ಷಾಮ

■ ವಿಜಯಸಾಕ್ಷಿ ಸುದ್ದಿ, ಗದಗ

ಈ ಬಾರಿಯ ಬಿಸಿಲಿನ ತಾಪಕ್ಕೆ ಇಡೀ ರಾಜ್ಯವೇ ತತ್ತರಿಸಿದೆ. ಸೂರ್ಯನ ಕೆಂಗಣ್ಣಿಗೆ ಸಕಲವೂ ಸುಟ್ಟು ಭಸ್ಮವಾಗುವಂತೆ ಭಾಸವಾಗುತ್ತಿದೆ. ಮನೆಯಿಂದ ಹೊರಬರಲು ಸಾರ್ವಜನಿಕರು ಹಿಂದೇಟು ಹಾಕುವಂತಾಗಿದೆ. ಬಾಯಾರಿಕೆ ನೀಗುವ ಜೀವಜಲ ಮರೀಚಿಕೆಯಾಗಿದೆ. ತೆರೆದ ಬಾವಿಗಳು ಪಾತಾಳ ಕಂಡರೂ ತೊಟ್ಟು ನೀರಿಗೂ ಗತಿಯಿಲ್ಲ ಎನ್ನುವಂತಾಗಿದೆ.

ಸದ್ಯದ ಪರಿಸ್ಥಿತಿಗೆ ಗದಗ ಜಿಲ್ಲೆಯೂ ಹೊರತಾಗಿಲ್ಲ. ಕುಡಿಯಲು ನೀರು ಸಿಗದೇ ಜನ-ಜಾನುವಾರುಗಳ ಜೀವಕ್ಕೂ ಸಂಚಕಾರ ಒದಗುವ ಪರಿಸ್ಥಿತಿಯಿದೆ. ಗದಗ ಜಿಲ್ಲೆಯಲ್ಲಿ ಈ ಬಾರಿ ಭೀಕರ ಜಲಕ್ಷಾಮ ಆವರಿಸಿದೆ. ಹಮ್ಮಿಗಿ ಬ್ಯಾರೇಜ್ ಡೆಡ್ ಸ್ಟೋರೇಜ್ ಹಂತಕ್ಕೆ ತಲುಪಿದ್ದು, ಅವಳಿ ನಗರಕ್ಕೆ ನೀರು ಪೂರೈಕೆಯಾಗದೇ 20 ದಿನಗಳು ಕಳೆದಿವೆ. ಒಂದೇ ಒಂದು ದಿನವೂ ನೀರಿಲ್ಲದೇ ಜೀವನ ಕಳೆಯಲಾರದ ಮನುಜರ ಪರಿಸ್ಥಿತಿ ಚಿಂತಾಜನಕವಾಗಿದೆ. ಪರಿಣಾಮ, ಜನಪ್ರತಿನಿಧಿಗಳ ವಿರುದ್ಧ ಸಾರ್ವಜನಿಕರು ಹಿಡಿಶಾಪ ಹಾಕುವಂತಾಗಿದೆ.

ಗದಗ-ಬೆಟಗೇರಿ ಅವಳಿ ನಗರವೂ ಸೇರಿದಂತೆ ಜಿಲ್ಲೆಯ ಹೆಚ್ಚಿನ ಗ್ರಾಮೀಣ ಪ್ರದೇಶಗಳಿಗೂ ಹಮ್ಮಿಗಿ ಬ್ಯಾರೇಜ್‌ನ ನೀರೇ ಆಧಾರ. ಆದರೆ, ಹಮ್ಮಿಗಿ ಬ್ಯಾರೇಜ್‌ನಲ್ಲಿಯೂ ನೀರು ಡೆಡ್ ಸ್ಟೋರೇಜ್



ಹಂತಕ್ಕೆ ತಲುಪಿದ್ದರ ಪರಿಣಾಮ, ಜನತೆ ನೀರು ಕಾಣದೇ 20 ದಿನಗಳೇ ಕಳೆದಿವೆ. ಗದಗ-ಬೆಟಗೇರಿ ಅವಳಿ ನಗರದ 35 ವಾರ್ಡ್‌ಗಳಲ್ಲಿ ಜೀವಜಲಕ್ಕಾಗಿ ನಿತ್ಯ ಪರದಾಡುವ ಸ್ಥಿತಿ ನಿರ್ಮಾಣವಾಗಿದೆ. ನಗರ ಪ್ರದೇಶದ ದಾಸರ ಓಣಿ, ಗಂಗಿಮಡಿ ಪ್ರದೇಶದಲ್ಲಿ ಸಾರ್ವಜನಿಕರು ಜೀವನಕ್ಕೆ ಆಧಾರವಾದ ಕೆಲಸ ಕಾರ್ಯಗಳನ್ನೂ ಬದಿಗೊತ್ತಿ ನೀರಿಗಾಗಿ ಪಾಳಿ ನಿಲ್ಲಬೇಕಾಗಿದೆ. ಟ್ಯಾಂಕರ್ ಮೂಲಕವಾದರೂ ನೀರು ಪೂರೈಸುವುದಾಗಿ ಭರವಸೆ ನೀಡಿದ್ದ ಅಧಿಕಾರಿಗಳೂ ಸಮರ್ಪಕ ನೀರು ಪೂರೈಕೆಗೆ ಮುಂದಾಗಿಲ್ಲ.

ಗದಗ ಜಿಲ್ಲೆಯ ಮುಂಡರಗಿ ತಾಲೂಕಿನ ಹಮ್ಮಿಗಿ ಗ್ರಾಮದ ಬಳಿ ತುಂಗಭದ್ರಾ ನದಿಗೆ ಬ್ಯಾರೇಜ್ ನಿರ್ಮಾಣ ಮಾಡಲಾಗಿದೆ. ಈ ಹಮ್ಮಿಗಿ ಬ್ಯಾರೇಜ್ ಸಾಮರ್ಥ್ಯ 3.12 ಟಿಎಂಸಿ. ಆದರೆ, ಹಮ್ಮಿಗಿ ಬ್ಯಾರೇಜ್



ಇನ್ನು ಕೆಲ ದಿನಗಳ ಒಳಗಾಗಿ ಮಳೆಯೂ ಸುರಿದಿಲ್ಲವೆಂದರೆ, ಜಲಕ್ಷಾಮದ ಬಿಸಿ ಇನ್ನಷ್ಟು ಹೆಚ್ಚಲಿದೆ ಎನ್ನುತ್ತಾರೆ ಅಧಿಕಾರಿಗಳು. ಪ್ರತಿ ಬಾರಿಯೂ ಬೇಸಿಗೆಯಲ್ಲಿ ಗದಗ-ಬೆಟಗೇರಿ ಅವಳಿ ನಗರದಲ್ಲಿ ಕುಡಿಯುವ ನೀರಿನ ಸಮಸ್ಯೆ ತಲೆದೋರುತ್ತಲೇ ಇದೆ. ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಸೂಕ್ತ ಪರಿಹಾರೋಪಾಯ ಕಂಡುಕೊಳ್ಳಲು ಮುಂದಾಗುತ್ತಿಲ್ಲ ಎಂಬುದು ಸಾರ್ವಜನಿಕರ ಆಕ್ರೋಶವಾಗಿದೆ.

ಹಿನ್ನೀರು ನಿಲ್ಲುವ ಸ್ಥಳದಲ್ಲಿನ ಗ್ರಾಮಗಳನ್ನು ಸ್ಥಳಾಂತರ ಮಾಡಲು ಕ್ರಮ ಕೈಗೊಳ್ಳದಿರುವ ಕಾರಣದಿಂದ ಕೇವಲ 1.76 ಟಿಎಂಸಿ ನೀರನ್ನು ಶೇಖರಣೆ ಮಾಡಲಾಗುತ್ತಿದೆ. ಈಗಾಲೇ ಎರಡು ಬಾರಿ ಭದ್ರಾ ಡ್ಯಾಮ್‌ನಿಂದ ನೀರು ಹರಿಸಲಾಗಿತ್ತು. ಈ ಬಾರಿ ಭದ್ರಾ ಡ್ಯಾಮ್‌ನಲ್ಲಿಯೂ ನೀರಿನ ಕೊರತೆಯಿರುವುದರಿಂದ ಭದ್ರಾ ನೀರು ಇತ್ತ ಹರಿದಿಲ್ಲ.

ಹೀಗೆಯೇ ಮುಂದುವರೆದರೆ, ಜನಜೀವನ ಇನ್ನಷ್ಟು ಸಂಕಷ್ಟ ಎದುರಿಸುವ ಸ್ಥಿತಿ ನಿರ್ಮಾಣವಾಗಲಿದೆ. ಇನ್ನಾದರೂ ಸರ್ಕಾರ ಗದಗ ಜಿಲ್ಲೆಗೆ ಶಾಶ್ವತವಾಗಿ ನೀರಿನ ಬವಣೆ ನೀಗುವ ಮಾರ್ಗೋಪಾಯಗಳನ್ನು ಹುಡುಕಿ ಪ್ರಾಮಾಣಿಕವಾಗಿ ಅನುಷ್ಠಾನಕ್ಕೆ ತರುವ ಕಾರ್ಯಕ್ಕೆ ಮುಂದಾಗಬೇಕಿದೆ.

## ಜಗಜ್ಯೋತಿ ಶ್ರೀ ಬಸವೇಶ್ವರ, ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಜಯಂತಿ




■ ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದ ಆದೇಶದಂತೆ ಲೋಕಸಭೆ ಚುನಾವಣೆ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ಜಗಜ್ಯೋತಿ ಶ್ರೀ ಬಸವೇಶ್ವರರ ಜಯಂತಿ ಮತ್ತು ಶಿವಶರಣೆ ಹೇಮರಡ್ಡಿ ಮಲ್ಲಮ್ಮನವರ ಜಯಂತಿಯನ್ನು ಶುಕ್ರವಾರ ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಸರಳ ಹಾಗೂ ಸಾಂಕೇತಿಕವಾಗಿ ಪೂಜೆ ಮತ್ತು ಪುಷ್ಪಾರ್ಚನೆ ಮೂಲಕ ಆಚರಿಸಲಾಯಿತು.

ಅಪರ ಜಿಲ್ಲಾಧಿಕಾರಿ ಸುರೇಖಾ ಅವರು ಸಾಂಸ್ಕೃತಿಕ ನಾಯಕ, ಜಗಜ್ಯೋತಿ ಶ್ರೀ ಬಸವೇಶ್ವರ ಹಾಗೂ ಶಿವಶರಣೆ ಶ್ರೀ ಹೇಮರಡ್ಡಿ ಮಲ್ಲಮ್ಮ ಅವರ ಭಾವಚಿತ್ರಕ್ಕೆ ಪೂಜೆಯೊಂದಿಗೆ ಪುಷ್ಪಾರ್ಚಣೆ ಸಲ್ಲಿಸಿ ಗೌರವಿಸಿ ನಮಿಸಿದರು.

ಈ ಸಂದರ್ಭದಲ್ಲಿ ಸಮಾಜದ ಮುಖಂಡರು, ಗಣ್ಯರು, ಹಿರಿಯ ನಾಗರಿಕರು, ಸಾರ್ವಜನಿಕರು ಉಪಸ್ಥಿತರಿದ್ದರು.

## ಬಸವಣ್ಣ ದೇವರ ರಥೋತ್ಸವದಲ್ಲಿ ಅವಘಡ: ತೇರಿನ ಗಾಲಿಗೆ ಸಿಲುಕಿ ವ್ಯಕ್ತಿ ಸಾವು



■ ವಿಜಯಸಾಕ್ಷಿ ಸುದ್ದಿ, ಅಣ್ಣಿಗೇರಿ

ಬಸವಣ್ಣ ದೇವರ ಜಾತ್ರೆಯ ತೇರಿನ ಗಾಲಿಗೆ ಸಿಲುಕಿ ವ್ಯಕ್ತಿಯೋರ್ವ ಸ್ಥಳದಲ್ಲೇ ದಾರುಣವಾಗಿ ಮೃತಪಟ್ಟ ಘಟನೆ ತಾಲೂಕಿನ ಮಜ್ಜಿಗುಡ್ಡ ಗ್ರಾಮದಲ್ಲಿ ಶುಕ್ರವಾರ ಸಂಜೆ ಜರುಗಿದೆ.

ಮೃತನನ್ನು ಮಜ್ಜಿಗುಡ್ಡ ಗ್ರಾಮದ ದಾವಲಸಾಬ ಹಸನಸಾಬ ಮೊಕಾಶಿ (50) ಎಂದು ಗುರುತಿಸಲಾಗಿದೆ. ಬಸವ ಜಯಂತಿ ಅಂಗವಾಗಿ ಮಜ್ಜಿಗುಡ್ಡ ಗ್ರಾಮದಲ್ಲಿ ಬಸವಣ್ಣ ದೇವರ ಜಾತ್ರೆ ಇತ್ತು. ಸಂಜೆ ತೇರು ಎಳೆಯುವ ಸಂದರ್ಭದಲ್ಲಿ ಭಕ್ತರ ನೂಕು ನುಗ್ಗಲು ಉಂಟಾಗಿ ಮೃತ ದಾವಲಸಾಬ ಕೆಳಗೆ ಬಿದ್ದಿದ್ದಾನೆ. ಆಗ ತೇರಿನ ಗಾಲಿ ತಲೆ ಮೇಲೆ ಹರಿದಿದ್ದರಿಂದ ಸ್ಥಳದಲ್ಲೇ ಆತ ಮೃತಪಟ್ಟಿದ್ದಾನೆ ಎನ್ನಲಾಗಿದೆ. ಸಂಭ್ರಮದಿಂದ ನಡೆದಿದ್ದ ಜಾತ್ರೆಯಲ್ಲಿ ಈ ಘಟನೆ ಗ್ರಾಮದಲ್ಲಿ ಶೋಕದ ವಾತಾವರಣಕ್ಕೆ ಕಾರಣವಾಯಿತು. ಸುದ್ದಿ ತಿಳಿದ ಅಣ್ಣಿಗೇರಿ ಪೊಲೀಸ್ ಠಾಣೆಯ ಹಿರಿಯ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಅಣ್ಣಿಗೇರಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದೆ.



ಗದಗ: ನಗರದ ವಾರ್ಡ್ ನಂ.15ರ ಬಸವೇಶ್ವರ ನಗರದಲ್ಲಿ ವಿಶ್ವಗುರು ಬಸವೇಶ್ವರ ಜಯಂತಿಯನ್ನು ಆಚರಿಸಲಾಯಿತು. ಬಸವೇಶ್ವರ ಪ್ರತಿಮೆಗೆ ಮಾಲಾರ್ಪಣೆ ಮಾಡಿದ ಯುವ ನಾಯಕ ಕೃಷ್ಣಗೌಡ ಪಾಟೀಲ ಬಸವೇಶ್ವರರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಲು ಕರೆ ನೀಡಿದರು. ಈ ಸಂದರ್ಭದಲ್ಲಿ ಕಾಂಗ್ರೆಸ್ ಯುವ ಮುಖಂಡ ಮೋಹನ ದೊಡಕುಂಡಿ ಸೇರಿದಂತೆ ವಾರ್ಡಿನ ಸಾರ್ವಜನಿಕರು ಹಾಗೂ ಮಹಿಳೆಯರು ಉಪಸ್ಥಿತರಿದ್ದರು.



ಗದಗ: ಗದಗ ನಗರದ ಉಸಗಿನಗಟ್ಟಿ ಓಣಿಯ ಶ್ರೀ ಗಂಜಿ ಬಸವೇಶ್ವರ ಜಾತ್ರಾಮಹೋತ್ಸವ ಶುಕ್ರವಾರ ಭಕ್ತ ಸಾಗರದ ಮದ್ಯ ವಿಜ್ರಂಭಣೆಯಿಂದ ಜರುಗಿತು.

### ಮಾರನಬಸರಿಯ ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ ಶಾಸಕ ಜಿ.ಎಸ್. ಪಾಟೀಲ

## ನವ ದಂಪತಿಗಳು ಸಮಾಜಮುಖಿಗಳಾಗಿ

■ ವಿಜಯಸಾಕ್ಷಿ ಸುದ್ದಿ, ರೋಣ

ನವ ದಂಪತಿಗಳು ಸಮಾಜಮುಖಿ ಜೀವನ ನಿರ್ವಹಿಸುವ ಮೂಲಕ ಕುಟುಂಬ ನಿರ್ವಹಣೆಯಲ್ಲಿ ಪ್ರಾಮಾಣಿಕತೆಯನ್ನು ತೋರಬೇಕು ಎಂದು ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಅವರು ಶುಕ್ರವಾರ ಮಾರನಬಸರಿ ಗ್ರಾಮದಲ್ಲಿ ರೇವಣಸಿದ್ದೇಶ್ವರ ಜಾತ್ರಾ ಮಹೋತ್ಸವ ಹಾಗೂ ಪುರಾಣ ಮಂಗಲದ ನಿಮಿತ್ತ ಜರುಗಿದ ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಸಾಮೂಹಿಕ ವಿವಾಹಗಳಿಂದ ದುಂದುವೆಚ್ಚಕ್ಕೆ ಕಡಿವಾಣ ಬೀಳಲಿದೆ. ಎಲ್ಲಕ್ಕಿಂತ ಮುಖ್ಯವಾಗಿ ಮಠಾಧೀಶರು ಮತ್ತು ಸರ್ವ



ಸಮಾಜದವರ ಆಶೀರ್ವಾದ ನವ ದಂಪತಿಗಳಿಗೆ ಲಭಿಸುತ್ತದೆ. ನವ ದಂಪತಿಗಳು ತಂದೆ-ತಾಯಿಗಳನ್ನು ಪ್ರೀತಿಯಿಂದ ಕಾಣಬೇಕು. ಅಲ್ಲದೆ ಹಿರಿಯರನ್ನು ಗೌರವಿಸುವ ಜೊತೆಗೆ ಮಕ್ಕಳ ಶೈಕ್ಷಣಿಕ ಚಟುವಟಿಕೆಗಳಿಗೆ ಪ್ರೋತ್ಸಾಹಿಸಬೇಕು ಎಂದರು.

ಧಾರವಾಡ ಮನ್ಸೂರ ಶ್ರೀಮಠದ ಬಸವರಾಜ ಶ್ರೀಗಳು ಮಾತನಾಡಿ, ಮಾರನಬಸರಿ ಗ್ರಾಮ ಸೌಹಾರ್ದತೆಯ ತವರೂರು. ಈ ಗ್ರಾಮದಲ್ಲಿ ಪುಣ್ಯದ ಕಾರ್ಯಗಳು ಹೆಚ್ಚಿನ ರೀತಿಯಲ್ಲಿ ನಡೆದುಕೊಂಡು ಬರುತ್ತಿವೆ. ನವ ದಂಪತಿಗಳು ಕುಟುಂಬದ ಹಿರಿಯರನ್ನು ಗೌರವಿಸಿ ಸಮಾಜಮುಖಿ ಜೀವನ ನಡೆಸಬೇಕು ಎಂದರು.

ಕುಟುಂಬ ಸಂತಸದಿಂದ ಕೂಡಿರಬೇಕಾದರೆ ಯುವಕರು ದುಶ್ಚಟಗಳಿಂದ ದೂರ ಇರಬೇಕು. ಯುವಕರು ದುಡಿಮೆಯತ್ತ ಗಮನ ಹರಿಸಬೇಕು. ಹಾಲುಮತ ಸಮಾಜದಿಂದ ಇನ್ನೂ ಹೆಚ್ಚಿನ ರೀತಿಯಲ್ಲಿ ಸಮಾಜಮುಖಿ ಕಾರ್ಯಗಳು ನಡೆಯಬೇಕು. ಜೊತೆಗೆ ರೇವಣಸಿದ್ದೇಶ್ವರರ ಅಣತಿಯಂತೆ ಭಕ್ತಿಯನ್ನು ಹೊಂದಬೇಕು ಎಂದರು.

ಕಾರ್ಯಕ್ರಮಕ್ಕೂ ಮುನ್ನ ಸಂಗೊಳ್ಳಿ ರಾಯಣ್ಣರ ಪ್ರತಿಮೆಯನ್ನು ಶ್ರೀಗಳು ಲೋಕಾರ್ಪಣೆಗೊಳಿಸಿದರು. ಷಣ್ಮುಖಪ್ಪಜ್ಜನವರು ಸಾನ್ನಿಧ್ಯ ವಹಿಸಿದ್ದರು. ಅಂದಪ್ಪ ಬಿಚ್ಚೂರ, ಬಸವರಾಜ ನವಲಗುಂದ, ಎಸ್. ಎಚ್. ಸೋಂಪುರ, ಶರಣಪ್ಪ ಕುರಿ, ಶಿವಶರಣಪ್ಪ ಅಬ್ಬಿಗೇರಿ, ಈರಪ್ಪ ನಿಡಗುಂದಿ, ಶಿವಪ್ಪ ಜಾಲಿಹಾಳ ಸೇರಿದಂತೆ ಸಮಾಜದ ಮುಖಂಡರು ಪಾಲ್ಗೊಂಡಿದ್ದರು.

## ಬಸವ ಜಯಂತಿ ಅಂಗವಾಗಿ ಭವ್ಯ ಮೆರವಣಿಗೆ

■ ವಿಜಯಸಾಕ್ಷಿ ಸುದ್ದಿ, ಗದಗ

ವಿಶ್ವಗುರು ಬಸವೇಶ್ವರ ಜಯಂತಿ ಅಂಗವಾಗಿ ಶುಕ್ರವಾರ ನಗರದ ತೋಂಟದಾರ್ಯ ಮಠದಲ್ಲಿ ಬಸವೇಶ್ವರರ ಭವ್ಯ ಮೆರವಣಿಗೆಗೆ ಡಾ.ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಚಾಲನೆ ನೀಡಿದರು. ಬಸವಪರ ಸಂಘಟನೆಗಳು ಹಾಗೂ ಬಸವಾಭಿಮಾನಿಗಳ ಸಮ್ಮುಖದಲ್ಲಿ ಮೆರವಣಿಗೆಯು ನಗರದಾದ್ಯಂತ ಸಂಚರಿಸಿತು.



ಈ ಸಂದರ್ಭದಲ್ಲಿ ತೋಂಟದಾರ್ಯ ಮಠದ ಆಡಳಿತಾಧಿಕಾರಿ ಎಸ್.ಎಸ್. ಪಟ್ಟಣಶೆಟ್ಟರ, ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಶೇಖಣ್ಣ ಕಳಸಾಪೂರ, ತೋಂಟದಾರ್ಯ ಜಾತ್ರಾ ಮಹೋತ್ಸವ ಸಮಿತಿ ಅಧ್ಯಕ್ಷ ಕೆ.ಎಚ್. ಬೇಲೂರ, ಬಸವದಳದ ಅಧ್ಯಕ್ಷ ವಿ.ಕೆ. ಕರೇಗೌಡ್ರ, ಎಸ್. ಎನ್. ಬಳ್ಳಾರಿ, ಶ್ರೀಮಠದ ಮ್ಯಾನೇಜರ್ ಎಂ.ಎಸ್. ಅಂಗಡಿ, ಅಮರೇಶ ಅಂಗಡಿ, ಕೆ.ಎಸ್. ಪಲ್ಲೇದ, ಶೇಖಣ್ಣ ಕವಳಿಕಾಯಿ, ಪ್ರಕಾಶ ಅಸುಂಡಿ, ದಾನಯ್ಯ ಗಣಾಚಾರಿ, ಐ.ಬಿ ಬೆನಕೊಪ್ಪ, ಶ್ರೀದೇವಿ ಶೆಟ್ಟರ್, ಗೌರಕ್ಕ ಬಡಿಗಣ್ಣವರ, ವಿರುಪಣ್ಣ ಬಳ್ಳೊಳ್ಳಿ ಸೇರಿದಂತೆ ಅನೇಕ ಬಸವಪರ ಸಂಘಟನೆಗಳ ಮುಖ್ಯಸ್ಥರು ಹಾಜರಿದ್ದರು.

ಜಗದ್ಗುರು ತೋಂಟದಾರ್ಯ ಜಾತ್ರಾ ಮಹೋತ್ಸವ ಸಮಿತಿ, ಲಿಂಗಾಯತ ಪ್ರಗತಿಶೀಲ ಸಂಘ, ಬಸವದಳ-ಬಸವಕೇಂದ್ರ, ಶರಣ ಸಾಹಿತ್ಯ ಪರಿಷತ್ತು, ಕದಳಿ ಮಹಿಳಾ ವೇದಿಕೆ, ಕನ್ನಡ ಸಾಹಿತ್ಯ ಪರಿಷತ್ತು, ಬಸವ ಯೋಗ ಕೇಂದ್ರ, ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರ, ದಲಿತ ಸಂಘರ್ಷ ಸಮಿತಿ, ಜಾಗತಿಕ ಲಿಂಗಾಯತ ಮಹಾಸಭಾ ಹಾಗೂ ಬಸವಪರ ಸಂಘಟನೆಗಳ ಸದಸ್ಯರು ಮೆರವಣಿಗೆಯಲ್ಲಿ ಭಾಗವಹಿಸಿದ್ದರು.

## ಸಂಪಾದಕೀಯ

# ಸ್ವತಂತ್ರ ಪತ್ರಿಕೋದ್ಯಮದ ಸಂಚಲನ

ಮಾತು ಮತ್ತೊಮ್ಮೆ ಮಾಧ್ಯಮಗಳತ್ತಲೆ ತಿರುಗುತ್ತಿದೆ. ಪತ್ರಿಕೋದ್ಯಮ ಈಗ ಪೂರ್ಣ ಪ್ರಮಾಣದಲ್ಲಿ ಉದ್ಯಮವೇ ಆಗಿದೆ. ಬಂಡವಾಳ ಶಾಹಿಗಳು ಮಾಧ್ಯಮ ಕ್ಷೇತ್ರವನ್ನು ಬಳಸಿಕೊಂಡು ಆದಾಯವನ್ನು ಹೆಚ್ಚಿಸಿಕೊಳ್ಳುವ ನಿಟ್ಟಿನಲ್ಲಿ ಕಾರ್ಯಪ್ರವೃತ್ತರಾಗಿದ್ದಾರೆ. ಇದರಿಂದ ಪತ್ರಿಕೋದ್ಯಮ ನಿಷ್ಪಕ್ಷಪಾತವಾಗಿ ಕೆಲಸ ಮಾಡಲು ಸಾಧ್ಯವಾಗುತ್ತಿಲ್ಲ.

ಅದರಲ್ಲೂ ಕಳೆದೊಂದು ದಶಕದ ಅವಧಿಯನ್ನು ಗಮನಿಸಿದಲ್ಲಿ ಮಾಧ್ಯಮಗಳು ಒಂದು ಕಡೆ ವಾಲಿದಂತೆ ಗೋಚರಿಸುತ್ತೇವೆ. ಮಾಧ್ಯಮಗಳ ಈ ನಡೆ ಬಗ್ಗೆ ದೇಶಾದ್ಯಂತ ವ್ಯಾಪಕ ಚರ್ಚೆ ಮತ್ತು ಟೀಕೆಯೂ ವ್ಯಕ್ತವಾಗುತ್ತಿದೆ.

ಇಂತಹ ವಿಷಮ ಪರಿಸ್ಥಿತಿಯಲ್ಲಿ ಸ್ವತಂತ್ರ ಪತ್ರಿಕೋದ್ಯಮ ನಿಧಾನಕ್ಕೆ ಬೇರೂರಲು ಆರಂಭಿಸಿದೆ. ಮುಖ್ಯವಾಹಿನಿಯ ಪತ್ರಿಕೋದ್ಯಮದಿಂದ ದೂರವಾದ ರವೀಶ್ ಕುಮಾರ್ ಅವರಂತಹ ಅನೇಕ ಪತ್ರಕರ್ತರು ಸ್ವತಂತ್ರ ಪತ್ರಿಕೋದ್ಯಮದ ಹಾದಿ ಹಿಡಿದಿದ್ದಾರೆ. ಸಾಮಾಜಿಕ ಜಾಲತಾಣಗಳ ಮೂಲಕ ಜನರನ್ನ ತಲುಪುತ್ತಿದ್ದಾರೆ.

ಅದರ ಸಾಲಿಗೆ ಧ್ರುವ ರಾಟಿ ಎನ್ನುವ ಯೂಟ್ಯೂಬರ್ ಸಹ ಸೇರಿದ್ದಾರೆ. ಪ್ರವಾಸಿ ತಾಣಗಳ ವಿಡಿಯೋ ಮಾಡುತ್ತಿದ್ದ ಯುವಕ ಈಗ ಪ್ರಧಾನಿ ನರೇಂದ್ರ ಮೋದಿ ಅವರನ್ನು ಟೀಕಿಸುತ್ತಿದ್ದಾರೆ. ಸಾಕಷ್ಟು ಅಧ್ಯಯನ ನಡೆಸಿ ಪ್ರಧಾನಿ ಮೋದಿ ವೈಫಲ್ಯಗಳನ್ನ ಜನರಿಗೆ ಅತ್ಯಂತ ಸುಲಭವಾದ ಭಾಷೆಯಲ್ಲಿ ತಿಳಿ ಹೇಳುತ್ತಿದ್ದಾರೆ.

ಧ್ರುವ ರಾಟಿ ಅವರಿಗೆ ಯಾವುದೇ ರಾಜಕೀಯ ಹಿನ್ನಲೆ ಇರದಿದ್ದರೂ, ಮುಖ್ಯ ವಾಹಿನಿ ಪತ್ರಿಕೋದ್ಯಮದಲ್ಲಿ ಕೆಲಸ ಮಾಡಿದ ಅನುಭವ ಇಲ್ಲದಿದ್ದರೂ ಒಬ್ಬ ಪತ್ರಕರ್ತ ಯಾವ ರೀತಿ ಜನರಿಗೆ ತಿಳಿಹೇಳಬೇಕೋ ಆ ರೀತಿ ಅತ್ಯಂತ ಸ್ಪಷ್ಟವಾಗಿ ತಮ್ಮ ವಿಚಾರಗಳನ್ನ ಹರಿಬಿಡುತ್ತಿದ್ದಾರೆ.

ದಿ ಡಿಕ್ಟೇಟರ್ ಮತ್ತು ವಾಟ್ಸಪ್ ಯೂನಿವರ್ಸಿಟಿ ಕುರಿತಾಗಿ ಧ್ರುವ ರಾಟಿ ಮಾಡಿದ ವಿಡಿಯೋಗಳು ದೇಶಾದ್ಯಂತ ಸಾಕಷ್ಟು ಸಂಚಲನ ಸೃಷ್ಟಿಸಿದೆ. ಆಡಳಿತ ಪಕ್ಷದ ವೈಫಲ್ಯಗಳನ್ನ ಅತ್ಯಂತ ಕರಾರುವಕ್ಕಾಗಿ ಮತ್ತು ಸಾಕ್ಷಾಧಾರಗಳೊಂದಿಗೆ ವಿವರಿಸುವ ಪರಿ ಜನರ ಮನಸ್ಸನ್ನು ಸೆಳೆಯುತ್ತಿದೆ.

ಪ್ರತಿಪಕ್ಷದ ನಾಯಕರು ಮಾಡಬೇಕಾದ ಕೆಲಸವನ್ನ ಒಬ್ಬ ಯೂಟ್ಯೂಬರ್ ಮಾಡುತ್ತಿದ್ದಾರೆ. ಪ್ರತಿಪಕ್ಷದಲ್ಲಿರುವ ನಾಯಕರು ಧ್ರುವ ರಾಟಿ ಅವರಿಂದ ವಿಷಯ ಸಂಗ್ರಹಣೆ, ನಿರೂಪಣೆಯನ್ನು ಕಲಿಯಬೇಕಾಗಿದೆ. ರಾಟಿ ಪೂರ್ಣಾವಧಿ ಪತ್ರಕರ್ತ ಅಲ್ಲದಿದ್ದರೂ, ಸ್ವತಂತ್ರ ಪತ್ರಿಕೋದ್ಯಮದಲ್ಲಿ ಸಂಚಲನ ಸೃಷ್ಟಿಸಿದ್ದಾರೆ.

## ಆನ್‌ಲೈನ್ ಸಾಲದ ಆ್ಯಪ್‌ನಿಂದ ಕಿರುಕುಳ; ತಮಿಳುನಾಡಿನ ವ್ಯಕ್ತಿ ಆತ್ಮಹತ್ಯೆಗೆ ಶರಣು



■ವಿಜಯಸಾಕ್ಷಿ ಸುದ್ದಿ, ಚೆನ್ನೈ

ತಮಿಳುನಾಡಿನ ಪುದುಪೆಟ್ಟೈ ಮೂಲದ ವ್ಯಕ್ತಿಯೊಬ್ಬರು 'ಕ್ವಿಕ್ ಕ್ಯಾಶ್' ಆಪ್ ಎಂಬ ಆನ್‌ಲೈನ್ ಸಾಲದ ಆ್ಯಪ್‌ನಿಂದ ಲೋನ್ ಪಡೆದು ಸಂಕಷ್ಟಕ್ಕೆ ಸಿಲುಕಿದ್ದಾರೆ. ಖಾ ಸಗಿ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದ ಗೋಪಿನಾಥ್ ಆನ್‌ಲೈನ್ ಸಾಲದ ಆ್ಯಪ್ ನವರ ಕಿರುಕುಳದಿಂದ ಬೇಸತ್ತು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ವರದಿಯಾಗಿದೆ.

ಬಡ್ಡಿ ಮತ್ತು ಅಸಲು ಮೊತ್ತವನ್ನು ಪಾವತಿಸುತ್ತಿದ್ದರೂ, ಕ್ವಿಕ್ ಕ್ಯಾಶ್ ಆ್ಯಪ್‌ನ ಉದ್ಯೋಗಿಗಳು ಗೀಪಿನಾಥ್‌ಗೆ ಬೆದರಿಕೆ ಹಾಕಿದ್ದರಿಂದ, ಅವರು ಕಂಪನಿಯ ಬ್ಲ್ಯಾಕ್‌ಮೇಲ್‌ಗೆ ಗುರಿಯಾಗಿದ್ದರು ಎನ್ನಲಾಗಿದೆ. ಹೆಚ್ಚಿನ ಹಣ ನೀಡಬೇಕಾಗಿದೆ, ಇಲ್ಲದಿದ್ದರೆ ಅವರ ಮಾರ್ಫ್ ಮಾಡಿದ ಅಸಭ್ಯ ಚಿತ್ರಗಳನ್ನು ಅವರ ಸಂಪರ್ಕದಲ್ಲಿರುವವರಿಗೆ ಕಳುಹಿಸಲಾಗುವುದು ಎಂದು ಬೆದರಿಸಿದ್ದಾರೆ ಎನ್ನಲಾಗಿದೆ.

ಈ ವಿಚಾರವಾಗಿ ಖಿನ್ನತೆಗೆ ಒಳಗಾಗಿದ್ದ ಗೋಪಿನಾಥ್ ಗುರುವಾರ ಬೆಳಗ್ಗೆ ಕೊಠಡಿಯಲ್ಲಿ ನೇಣು ಬಿಗಿದ ಸ್ಥಿತಿಯಲ್ಲಿ ಪತ್ತೆಯಾಗಿದ್ದಾರೆ.

"ಮಿಸ್ ಯು ಅಮ್ಮಾ ಅಪ್ಪಾ, ಬೈ. ನಾನು ಹೊರಡುತ್ತಿದ್ದೇನೆ. ಸೆಂಥಿಲ್ ಅಣ್ಣ ನಿನ್ನನ್ನು ನೋಡಿಕೊಳ್ಳುತ್ತಾನೆ. ಹಣದ ಸಮಸ್ಯೆಯಿಂದಾಗಿ ನಾನು ಹೊರಡುತ್ತಿದ್ದೇನೆ ಎಂದು ದಯವಿಟ್ಟು ಕಚೇರಿಗೆ ತಿಳಿಸಿ. ಕ್ವಿಕ್ ಕ್ಯಾಶ್ ಅಪ್ಲಿಕೇಶನ್ ನನ್ನ ಚಿತ್ರಗಳನ್ನು ಎಲ್ಲರಿಗೂ ಕಳುಹಿಸಿದೆ. ಹಾಗಾಗಿ ನಾನು ಹೊರಡುತ್ತಿದ್ದೇನೆ" ಎಂದು ಅವರು ತಮ್ಮ ಪೋಷಕರಿಗೆ ಸಂದೇಶ ಕಳುಹಿಸಿದ್ದಾರೆ.

ಗೋಪಿನಾಥ್ ಅವರ ತಂದೆ ಮಣಿ ಮಾತನಾಡಿ, "ಕಳೆದ ವಾರ ಆತ ಹಣವ ಕಳುಹಿಸಲು ಪ್ರಯತ್ತಿರುವುದಾಗಿ ಹೇಳಿದ್ದ. ಆದರೆ, ವಹಿವಾಟು ವಿಫಲವಾಗಿದೆ. ಆದರೂ ಅವರು ತಮ್ಮ ಕಂಪನಿಯಲ್ಲಿ ಕೆಲಸ ಮಾಡುವವರಿಗೆ ಅಸಭ್ಯ ಚಿತ್ರಗಳನ್ನು ಕಳುಹಿಸುತ್ತಿದ್ದಾರೆ ಎಂದು ಬ್ಲ್ಯಾಕ್‌ಮೇಲ್ ಮಾಡಲಾಗುತ್ತಿತ್ತು. ಅವನಿಗೆ ತುಂಬಾ ನಾಚಿಕೆಯಾಯಿತು. ಆತ ನಿನ್ನೆ ರಜೆ ತೆಗೆದುಕೊಂಡಿದ್ದಾರೆ ಮತ್ತು ನಾವು ಬೆಳಿಗ್ಗೆ ಪೊಲೀಸ್ ಕಮಿಷನರ್ ಕಚೇರಿಗೆ ಹೋಗಿ ದೂರು ನೀಡುತ್ತೇವೆ ಎಂದು ನಾನು ಅವರಿಗೆ ಹೇಳಿದೆ. ಆದರೆ ಬೆಳಗ್ಗೆ ನೇಣು ಬಿಗಿದ ಸ್ಥಿತಿಯಲ್ಲಿ ಪತ್ತೆಯಾಗಿದೆ' ಎಂದು ಮಣಿ ಹೇಳಿದ್ದಾರೆ.

ಪೊಲೀಸರು ಗೋಪಿನಾಥ್ ಶವವನ್ನು ಹೊರತೆಗೆದು, ತನಿಖೆ ಆರಂಭಿಸಿ ಶವಪರೀಕ್ಷೆಗೆ ಕಳುಹಿಸಿದ್ದಾರೆ.

## ರಾಜ್ಯಪಾಲ ಆನಂದ ಬೋಸ್ ಲೈಂಗಿಕ ಕಿರುಕುಳ ಪ್ರಕರಣ: ರಾಷ್ಟ್ರಪತಿಗೆ ಪತ್ರ ಬರೆಯಲು ಮುಂದಾದ ಸಂತ್ರಸ್ತೆ

■ವಿಜಯಸಾಕ್ಷಿ ಸುದ್ದಿ, ಪಶ್ಚಿಮ ಬಂಗಾಳ

ಲೈಂಗಿಕ ಕಿರುಕುಳ ಆರೋಪದ ಕುರಿತು ಪಶ್ಚಿಮ ಬಂಗಾಳದ ಗವರ್ನರ್ ಸಿವಿ ಆನಂದ ಬೋಸ್ ಅವರು ರಾಜಭವನದಲ್ಲಿ ಅನೇಕ ಸಿಸಿಟಿವಿ ದೃಶ್ಯಾವಳಿಗಳನ್ನು ಪ್ರದರ್ಶಿಸಿದ ಒಂದು ದಿನದ ನಂತರ, ರಾಜಭವನದ ಗುತ್ತಿಗೆ ಉದ್ಯೋಗಿ, ಸಂತ್ರಸ್ತ ಮಹಿಳೆ ಶುಕ್ರವಾರ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಗೆ ಪತ್ರ ಬರೆಯುವುದಾಗಿ ಹೇಳಿದ್ದಾರೆ.

ಮುಖವನ್ನು ಬ್ಲರ್ ಮಾಡದೆ ವಿಡಿಯೊ ಪ್ರದರ್ಶಿಸಿರುವ ಕಾರಣ ನನ್ನ ಗುರುತನ್ನು ಬಹಿರಂಗಪಡಿಸಲಾಗಿದೆ ಎಂದು ಹೇಳಿರುವ ಅವರು, ಎಡಿಟ್ ಮಾಡದ ತುಣುಕನ್ನು ಸಾರ್ವಜನಿಕವಾಗಿ ಪ್ರದರ್ಶಿಸಿದ್ದರಿಂದ ತನ್ನ ಆಕ್ಷೇಪಣೆ ಎತ್ತಿದ್ದಾರೆ.

ರಾಜ್ಯಪಾಲ ಬೋಸ್ ಅವರು ಅನುಭವಿಸುತ್ತಿರುವ ಸಾಂವಿಧಾನಿಕ ವಿನಾಯಿತಿಯ ಕಾರಣದಿಂದಾಗಿ ಅಸಹಾಯಕರಾಗಿರುವ ಕಲ್ಕತ್ತಾ ಪೊಲೀಸರ ಮೇಲೆ ಹೆಚ್ಚು ಭರವಸೆ ಇಡಲು ಸಾಧ್ಯವಿಲ್ಲ ಎಂದು ಹೇಳಿದ ಸಂತ್ರಸ್ತೆ, ತಾನು ತೀವ್ರ ಖಿನ್ನತೆಗೆ ಒಳಗಾಗುತ್ತಿದ್ದೇನೆ ಮತ್ತು ರಾಷ್ಟ್ರಪತಿಗಳಿಗೆ ಪತ್ರ ಬರೆಯುವುದು ನ್ಯಾಯಕ್ಕಾಗಿ ಏಕೈಕ ಆಶ್ರಯವಾಗಿದೆ ಎಂದು ಹೇಳಿದ್ದಾರೆ.

"ಸಾಂವಿಧಾನಿಕ ವಿನಾಯಿತಿಯಿಂದಾಗಿ ಹಾಲಿ ರಾಜ್ಯಪಾಲರಿಗೆ ಏನೂ ಆಗುವುದಿಲ್ಲ ಎಂದು ನನಗೆ ತಿಳಿದಿದೆ.

# ಜಿಲ್ಲಾಧಿಕಾರಿ ಕಚೇರಿಯಲ್ಲಿ ಬಸವೇಶ್ವರ ಜಯಂತಿ ಆಚರಣೆ

■ವಿಜಯಸಾಕ್ಷಿ ಸುದ್ದಿ, ಧಾರವಾಡ



ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಶುಕ್ರವಾರ ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಗಜ್ಯೋತಿ ಶ್ರೀ ಬಸವೇಶ್ವರ ಜಯಂತಿ ಹಾಗೂ ಶಿವಶರಣೆ ಶ್ರೀ ಹೇಮರಡ್ಡಿ ಮಲ್ಲಮ್ಮ ಜಯಂತಿಯನ್ನು ಆಚರಿಸಲಾಯಿತು.

ಜಿಲ್ಲಾಧಿಕಾರಿ ದಿವ್ಯಪ್ರಭು ಅವರು ಜಗಜ್ಯೋತಿ ಶ್ರೀ ಬಸವೇಶ್ವರ ಹಾಗೂ ಶಿವಶರಣೆ ಶ್ರೀ ಹೇಮರಡ್ಡಿ ಮಲ್ಲಮ್ಮರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದರು.

ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಜಯಂತಿ ಕಾರ್ಯಕ್ರಮವನ್ನು ಸರಳವಾಗಿ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಹುಬ್ಬಳ್ಳಿ-ಧಾರವಾಡ ಮಹಾನಗರ ಪೊಲೀಸ್ ಆಯುಕ್ತರಾದ ರೇಣುಕಾ ಸುಕುಮಾರ್, ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಡಾ.ಗೋಪಾಲ್ ಬ್ಯಾಕೋಡ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ, ಸಮಾಜದ ಮುಖಂಡರು, ಗಣ್ಯರು, ಹಿರಿಯ ನಾಗರಿಕರು, ಸಾರ್ವಜನಿಕರು ಉಪಸ್ಥಿತರಿದ್ದರು.

## ಬಸವ ಜಯಂತಿ ಆಚರಣೆ



■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಬಸವೇಶ್ವರ ಜಯಂತಿ ಅಂಗವಾಗಿ ಇಲ್ಲಿಯ ವಿವಿಧ ಸಂಘಟನೆಗಳಿಂದ ಎತ್ತುಗಳ ಮೆರವಣಿಗೆ ಮಾಡುವ ಮೂಲಕ ಸಂಭ್ರಮದಿಂದ ಆಚರಿಸಲಾಯಿತು.

ಮಲ್ಲಿಕಾರ್ಜುನ ಭಜನಾ ಸಂಘದ ಕಾರ್ಯಕರ್ತರು ಬಸವೇಶ್ವರರ ತತ್ವಾದರ್ಶಗಳ ಹಾಡುಗಳನ್ನು ಹಾಡುತ್ತಾ ಗ್ರಾಮದ ಪ್ರಮುಖ ಬೀದಿಗಳಲ್ಲಿ ರೈತನ ಬೆನ್ನೆಲುಬಾಗಿರುವ ಎತ್ತುಗಳನ್ನು ಮೆರವಣಿಗೆ ಮಾಡಿದರು. ಎತ್ತುಗಳಿಗೆ ಬಲೂನಗಳು ಹಾಗೂ ಬಣ್ಣದ ಬಟ್ಟೆಗಳನ್ನು ಹಾಕಿ ರೈತರು ಸಂಭ್ರಮಸಿದರು. ವಿವಿಧ ಓಣಿಯ ರೈತರು ಗ್ರಾಮದ ಹಾಲಗೊಂಡ ಬಸವೇಶ್ವರ ದೇವಸ್ಥಾನದವರೆಗೆ ತಮ್ಮ ಎತ್ತುಗಳನ್ನು ಮೆರವಣಿಗೆ ಮಾಡಿ ವಿಶೇಷ ಪೂಜೆ ಸಲ್ಲಿಸಿಸಿದರು.

## ಕಳಸಾಪೂರದಲ್ಲಿ ಬಸವ ಜಯಂತಿ ಆಚರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಕಳಸಾಪೂರ ಗ್ರಾಮ ಪಂಚಾಯಿತಿಯಲ್ಲಿ ವಿಶ್ವಗುರು ಬಸವಣ್ಣನವರ ಮತ್ತು ಹೇಮರಡ್ಡಿ ಮಲ್ಲಮ್ಮರವರ ಜಯಂತಿಯನ್ನು ಆಚರಿಸಲಾಯಿತು.

ವಿಶೇಷ ಆಹ್ವಾನಿತರಾದ ಕಳಸಾಪೂರ ಬಸವಕೇಂದ್ರದ ಕಾರ್ಯಾಧ್ಯಕ್ಷ ಮಲ್ಲಿಕಾರ್ಜುನ ಖಂಡಮ್ಮನವರ ಮಾತನಾಡಿ, 12ನೇ ಶತಮಾನದಲ್ಲಿ ವಿಶ್ವಗುರು ಬಸವಣ್ಣನವರು ಸರ್ವ ಜನಾಂಗದ ಅನುಭವ ಮಂಟಪ ಸ್ಥಾಪಿಸಿದ ಮಹಾನ್‌ವ್ಯಕ್ತಿಯಾಗಿದ್ದಾರೆ. ಅವರ ವಚನಗಳು ಇಂದಿನ ಕಾಲಕ್ಕೂ ಅತ್ಯಂತ ಪ್ರಸ್ತುತವಾಗಿವೆ ಎಂದರು.

ಕಾರ್ಯಕ್ರಮದಲ್ಲಿ ಗ್ರಾ.ಪಂ ಅಧ್ಯಕ್ಷರು, ಉಪಾಧ್ಯಕ್ಷರು, ಸರ್ವ ಸದಸ್ಯರು, ಗ್ರಾಮದ ಗುರು-ಹಿರಿಯರು ಪಾಲ್ಗೊಂಡಿದ್ದರು. ಅಭಿವೃದ್ಧಿ ಅಧಿಕಾರಿ ಕೊಟ್ರೇಶ ಓಲಿ ಸ್ವಾಗತಿಸಿ ನಿರೂಪಿಸಿದರು. ಮತ್ತು ನಿರೂಪಣೆಯನ್ನು ಮಾಡಿದರು ಎಂದು ಸದಸ್ಯ ಕಿರಣ ಕೋರ್ಪಡೆ ತಿಳಿಸಿದ್ದಾರೆ.



### ಗದಗ ಶಹರ ಸಂಪನ್ಮೂಲ ಕೇಂದ್ರದಲ್ಲಿ ಬಸವ ಜಯಂತಿ

# ಬಸವಣ್ಣ ಶ್ರೇಷ್ಠ ಚಿಂತಕರು



■ವಿಜಯಸಾಕ್ಷಿ ಸುದ್ದಿ, ಗದಗ

12ನೇ ಶತಮಾನದ ಮಹಾನ್ ಕ್ರಾಂತಿಕಾರಿ ವಿಭೂತಿ ಪುರುಷ ಬಸವಣ್ಣನವರು ಸಾಮಾಜಿಕ ಚಿಂತನೆಗೆ ಒಂದು ಹೊಸ ದೃಷ್ಟಿಕೋನ ಬಿತ್ತಿದವರೆಂದು ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಎಸ್. ಬುರಡಿ ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ಸಂಪನ್ಮೂಲ ಕೇಂದ್ರದಲ್ಲಿ ಜರುಗಿದ ಬಸವೇಶ್ವರ ಜಯಂತಿ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದರು.

ಬಸವಣ್ಣನವರು ಕಾಯಕದ ಮಹತ್ವದ ಕುರಿತಾಗಿ ಮನಮುಟ್ಟುವಂತೆ ತಮ್ಮ ವಚನಗಳಲ್ಲಿ ಬಿಂಬಿಸಿದ್ದಾರೆ. ಕಾಯಕವೇ ಕೈಲಾಸವೆಂಬ ನುಡಿಯನ್ನು ಆಚರಣೆಗೆ ತರುವ ಮೂಲಕ ನಾವು ಬಸವಣ್ಣನವರಿಗೆ ಗೌರವ ಸಲ್ಲಿಸಬೇಕು. ವಚನಗಳ ಮೂಲಕ ಚಿಂತನೆಗೆ ದಾರಿ ಮಾಡಿಕೊಟ್ಟ ಶ್ರೇಷ್ಠ ಚಿಂತಕ ಬಸವಣ್ಣನವರು ಎಂದರು.

ಸಂಪನ್ಮೂಲ ವ್ಯಕ್ತಿ ಪ್ರಕಾಶ ಮಂಗಳೂರ ಮಾತನಾಡಿ, ಆಚಾರವೇ ಸ್ವರ್ಗ-ಅನಾಚಾರವೇ ನರಕ ಎಂಬ ಬಸವಣ್ಣನವರ ನುಡಿಯಲ್ಲಿ ನಡೆ-ನುಡಿ, ಆಚಾರ-ವಿಚಾರಗಳಲ್ಲಿ ಶುದ್ಧತೆ ಇರಬೇಕೆಂಬುದನ್ನು ಕಾಣುತ್ತೇವೆ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಸಂಪನ್ಮೂಲ ವ್ಯಕ್ತಿ ಕೆ.ಎಸ್. ಬೇಲೇರಿ, ಶರಣರ ಬದುಕು-ಬರಹ ಅಮೂಲ್ಯವಾದದ್ದು. ನುಡಿದಂತೆ ನಡೆದ ಮಹಾಪುರುಷರು. ಇವರ ಆದರ್ಶಯುತವಾದ ಬದುಕು ನಮಗೆ ಸದಾ ದಾರಿದೀಪ ಎಂದರು.

2024ರಲ್ಲಿ ಜರುಗಿದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯ ಗುಣಮಟ್ಟ ಸುಧಾರಣೆಗಾಗಿ, ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗಾಗಿ ವಿವಿಧ ಚಟುವಟಿಕೆಗಳನ್ನು ಹಮ್ಮಿಕೊಂಡು ಉತ್ತಮ ಫಲಿತಾಂಶ ಪಡೆಯುವಲ್ಲಿ ಶ್ರಮಿಸಿದ ಶಿಕ್ಷಣಾಧಿಕಾರಿ ಆರ್.ಎಸ್. ಬುರಡಿ, ಸಂಪನ್ಮೂಲ ವ್ಯಕ್ತಿಗಳಾದ ಪ್ರಕಾಶ ಮಂಗಳೂರ, ಶ್ಯಾಮ ಲಾಂಡೆ ಹಾಗೂ ಐ.ಬಿ. ಮಡಿವಾಳರ ಇವರನ್ನು ಎಲ್ಲ ಸಂಪನ್ಮೂಲ ವ್ಯಕ್ತಿಗಳು ಸನ್ಮಾನಿಸುವ ಮೂಲಕ ಕಾಯಕದ ಮಹತ್ವವನ್ನು ಸಾರಿದರು.

ಪ್ರಾರಂಭದಲ್ಲಿ ದೀಪಾ ಬೇವಿನಮರದ ಮತ್ತು ತನು ಹೂಗಾರ ವಚನ ಪ್ರಾರ್ಥನೆಗೈದರು. ರವಿ ಹೆಬ್ಬಳ್ಳಿ ಸ್ವಾಗತಿಸಿದರು. ವ್ಹಿ.ಟಿ. ದಾಸರಿ ನಿರೂಪಿಸಿದರು. ಸುಮಾ ಹಚಡದ ವಂದಿಸಿದರು. ಇ.ಡಿ. ಹುಗ್ಗೆಣ್ಣವರ ಮತ್ತು ಆರ್.ಡಿ. ಬೆಣಗಿ ಉಪಸ್ಥಿತರಿದ್ದರು.

# ಶರಣ ಚಿಂತನೆಯಿಂದ ಸಾತ್ವಿಕ ಸಮಾಜ ನಿರ್ಮಾಣ ಸಾಧ್ಯ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಪಟ್ಟಣದ ತಹಸೀಲ್ದಾರ ಕಚೇರಿಯಲ್ಲಿ ಶುಕ್ರವಾರ ಜಗಜ್ಯೋತಿ ಬಸವಣ್ಣ ಮತ್ತು ಶಿವಶರಣೆ ಹೇಮರೆಡ್ಡಿ ಮಲ್ಲಮ್ಮನ ಜಯಂತಿ ಆಚರಿಸಲಾಯಿತು.

ಈ ವೇಳೆ ಮಾತನಾಡಿದ ಉಪತಹಸೀಲ್ದಾರ ಮಂಜುನಾಥ ಅಮಾಸಿ, ಮಹಾ ಮಾನವತಾವಾದಿ ಬಸವಣ್ಣನವರು ಮತ್ತು ಶಿವಶರಣೆ ಹೇಮರೆಡ್ಡಿ ಮಲ್ಲಮ್ಮನವರು ಮಾನವ ಸಮಾಜಕ್ಕೆ ನೀಡಿದ ಕಾಯಕನಿಷ್ಠೆ, ಭಕ್ತಿ, ದಾಸೋಹ, ಸಮಾನತೆ, ಮಾನವೀಯ ಮೌಲ್ಯಗಳ ಚಿಂತನೆ-ಸಿದ್ಧಾಂತಗಳು ಇಂದಿಗೂ ಪ್ರಸ್ತುತ ಮತ್ತು ಸಾರ್ವಕಾಲಿಕ ಸತ್ಯಗಳಾಗಿವೆ. ಕಾಯಕವೇ ಕೈಲಾಸವಾಗಿದ್ದು, ಎಲ್ಲರೂ ಸಮಾನರು, ಮೇಲು-ಕೀಳು ಬೇಡ ಎಂದು ಅರಿವು ಮೂಡಿಸಿ ಸಾಮಾಜಿಕ ಬದಲಾವಣೆಯ ಹರಿಕಾರರಾದರು. ಎಲ್ಲರೂ ಅವರ ಚಿಂತನೆಗಳನ್ನು ಬದುಕಿನಲ್ಲಿ ರೂಢಿಸಿಕೊಂಡರೆ ಸಾತ್ವಿಕ ಸಮಾಜ ನಿರ್ಮಾಣ ಸಾಧ್ಯ ಎಂದರು.

ಈ ವೇಳೆ ಕಂದಾಯ ನಿರೀಕ್ಷಕ ಬಿ.ಎಂ. ಕಾತರಾಳ, ಪ್ರಶಾಂತ ಸನದಿ, ವೆಂಕನಗೌಡ ಪಾಟೀಲ, ಬಾಬಣ್ಣ ಅಳವಂಡಿ, ಮಹೇಶ ಹಾದಿಮನಿ, ಆಯ್.ಬಿ. ಭೂತರೆಡ್ಡಿ ಸೇರಿ ಹಲವರಿದ್ದರು. ಪಟ್ಟಣದ ಸೇರಿ ತಾಲೂಕಿನಾದ್ಯಂತ ಸರ್ಕಾರಿ ಕಚೇರಿ, ಗ್ರಾ.ಪಂ, ತಾ.ಪಂ ಕಾರ್ಯಾಲಯ, ಶಾಲಾ-ಕಾಲೇಜುಗಳಲ್ಲಿ ಶರಣ-ಶರಣೆಯರ ಜಯಂತ್ಯುತ್ಸವ ಆಚರಿಸಲಾಯಿತು.

## ಸಂದೇಶಖಾಲಿ ವಿವಾದ: ವೈರಲ್ ವಿಡಿಯೊ ಹಳೆಯದು ಎಂದು ಬಿಜೆಪಿ ನಾಯಕರಿಂದ ಸಮರ್ಥನೆ



■ವಿಜಯಸಾಕ್ಷಿ ಸುದ್ದಿ, ಸಂದೇಶಖಾಲಿ

ಸಂದೇಶಖಾಲಿ ಅತ್ಯಾಚಾರ ಆರೋಪ ವಿಚಾರವು ತೃಣಮೂಲ ಕಾಂಗ್ರೆಸ್ (ಟಿಎಂಸಿ) ಮತ್ತು ಭಾರತೀಯ ಜನತಾ ಪಕ್ಷ (ಬಿಜೆಪಿ) ನಡುವೆ ಆರೋಪ-ಪ್ರತ್ಯಾರೋಪಗಳಿಗೆ ಕಾರಣವಾಗಿದ್ದು, ಲೋಕಸಭೆ ಮತದಾನದ ಹೊತ್ತಿನಲ್ಲಿ ಪಶ್ಚಿಮ ಬಂಗಾಳದ ಹೃದಯಭಾಗದಲ್ಲಿರುವ ಸಂದೇಶಖಾಲಿ ಎಂಬ ಸಣ್ಣ ಪಟ್ಟಣವು ಮತ್ತೆ ರಾಜಕೀಯ ಬಿರುಗಾಳಿಯ ಕೇಂದ್ರಬಿಂದುವಾಗಿದೆ.

'ಸ್ಥಳೀಯ ಮಹಿಳಾ ಬಿಜೆಪಿ ನಾಯಕಿಯೊಬ್ಬರು ಖಾಲಿ ಪೇಪರ್‌ಗಳ ಮೇಲೆ ಅನೇಕ ಮಹಿಳೆಯರ ಸಹಿ ಹಾಕಿಸಿಕೊಂಡು ದೂರು ನೀಡಿದ್ದಾರೆ' ಎಂಬ ಹಲವಾರು ಹೊಸ ವೀಡಿಯೊಗಳು ವೈರಲ್ ಆದ ನಂತರ, ಸಂದೇಶಖಾಲಿಯಲ್ಲಿನ ಘಟನೆಗಳ ಬಗ್ಗೆ ಬಿಜೆಪಿಯು ಸುಳ್ಳುಗಳನ್ನು ಹರಡುತ್ತಿದೆ ಎಂದು ಟಿಎಂಸಿ ಆರೋಪಿಸಿದೆ. ಖಾಲಿ ಪೇಪರ್ ಮೇಲೆ ಸಹಿ ಪಡೆದುಕೊಂಡು, ಅದನ್ನು ಟಿಎಂಸಿ ನಾಯಕರ ಮೇಲೆ ಲೈಂಗಿಕ ದೌರ್ಜನ್ಯದ ದೂರುಗಳಾಗಿ ಭರ್ತಿ ಮಾಡಲಾಯಿತು ಎಂದು ಆರೋಪಿಸಿದೆ.

ಅತ್ಯಾಚಾರದ ಆರೋಪಗಳನ್ನು ಸೃಷ್ಟಿಸಲಾಗಿದೆ ಮತ್ತು ರಾಜ್ಯ ನಾಯಕರ ಆಜ್ಞೆಯ ಮೇರೆಗೆ ದಾಖಲಿಸಲಾಗಿದೆ ಎಂದು ಹೇಳುವ ಸ್ಥಳೀಯ ಬಿಜೆಪಿ ನಾಯಕ ಗಂಗಾಧರ ಕೋಯಲ್ ಒಳಗೊಂಡ ಸಂದೇಶಖಾಲಿ "ಸ್ಟಿಂಗ್ ಆಪರೇಷನ್" ವೀಡಿಯೊವನ್ನು ಟಿಎಂಸಿ ಸಾಮಾಜಿಕ ಮಾಧ್ಯಮಗಳಲ್ಲಿ ಅನಾವರಣಗೊಳಿಸಿದೆ.

ಸಂದೇಶ್‌ಖಾಲಿಯ ಮಹಿಳೆಯರು ಟಿಎಂಸಿ ಪ್ರಬಲ ವ್ಯಕ್ತಿ ಷಹಜಹಾನ್ ಮತ್ತು ಅವರ ಸಹಾಯಕರಿಂದ ಅತ್ಯಾಚಾರ, ಲೈಂಗಿಕ ಕಿರುಕುಳ ನೀಡಿದ್ದಾರೆ ಎಂದು ಆರೋಪಿಸಿದ್ದಾರೆ. ಇದು ಬಂಗಾಳದ ಬಿಜೆಪಿಯಿಂದ ಬೃಹತ್ ಪ್ರತಿಭಟನೆಗಳನ್ನು ಪ್ರೇರೇಪಿಸಿತು.

ತೃಣಮೂಲದ ವಿರುದ್ಧ ಮಾತನಾಡಿದ ಬಿಜೆಪಿಯ ಬಸಿರ್ಹತ್ ಅಭ್ಯರ್ಥಿ ರೇಖಾ ಪಾತ್ರಾ, ತಮ್ಮ ಹಳೆಯ ವೀಡಿಯೊಗಳನ್ನು ಇಟ್ಟುಕೊಂಡು ನಮ್ಮ ಪ್ರಚಾರ ಕೆಡಿಸಲು ಬಳಸಲಾಗುತ್ತಿದೆ ಎಂದು ಹೇಳಿದರು.

"ಬಿಜೆಪಿ ನನ್ನನ್ನು ಅಭ್ಯರ್ಥಿಯನ್ನಾಗಿ ನಿಲ್ಲಿಸುವ ಮೊದಲೇ ಟಿಎಂಸಿ ನನ್ನ ಹಳೆಯ ವೀಡಿಯೊವನ್ನು ಸಂದೇಶ್‌ಖಾಲಿ ಚಳವಳಿಯನ್ನು ಕೆಡಿಸಲು ಬಳಸುತ್ತಿರುವುದನ್ನು ನೋಡಿ ನನಗೆ ತುಂಬಾ ಬೇಸರವಾಗಿದೆ" ಎಂದು ಪಾತ್ರ ಹೇಳಿದರು. ತನ್ನ ಅಫಿಡವಿಟ್‌ಗಳಲ್ಲಿ ಲೈಂಗಿಕ ದೌರ್ಜನ್ಯದ ಘಟನೆಗಳನ್ನು ಸ್ಪಷ್ಟವಾಗಿ ಉಲ್ಲೇಖಿಸಿದ್ದರೂ, ಪಶ್ಚಿಮ ಬಂಗಾಳ ಪೊಲೀಸರು ತನ್ನನ್ನು ಬಲವಂತಪಡಿಸುತ್ತಿದ್ದಾರೆ ಎಂದು ಅವರು ಆರೋಪಿಸಿದರು.

ಟಿಎಂಸಿ ಕಾರ್ಯಕರ್ತರೊಬ್ಬರು ನೀಡಿದ ದೂರಿನ ಆಧಾರದ ಮೇಲೆ ಬಸಿರ್‌ಹತ್ ಪೊಲೀಸರು ಗಂಗಾಧರ ಕೋಯಲ್ ಮತ್ತು ರೇಖಾ ಪಾತ್ರ ಸೇರಿದಂತೆ ಪ್ರಮುಖ ಬಿಜೆಪಿ ವ್ಯಕ್ತಿಗಳ ವಿರುದ್ಧ ಎಫ್‌ಐಆರ್ ದಾಖಲಿಸಿದ್ದಾರೆ. ವೈರಲ್ ಸ್ಟಿಂಗ್ ವೀಡಿಯೋವನ್ನು ಪುರಾವೆಯಾಗಿ ಉಲ್ಲೇಖಿಸಿ, ಮಹಿಳೆಯರ ವಿರುದ್ಧದ ಅಪರಾಧಗಳ ಪ್ರಕರಣಗಳನ್ನು ನಿರ್ಮಿಸಲು ಸಂಚು ರೂಪಿಸಲಾಗಿದೆ ಎಂದು ದೂರಿನಲ್ಲಿ ಆರೋಪಿಸಲಾಗಿದೆ.

ಸಂದೇಶಖಾಲಿ ನಿವಾಸಿಗಳು ಬಿಜೆಪಿಯ ತಂತ್ರಗಳನ್ನು ಖಂಡಿಸುವ ಮತ್ತು ಸುಳ್ಳು ಅತ್ಯಾಚಾರ ಪ್ರಕರಣಗಳನ್ನು ದಾಖಲಿಸುವಲ್ಲಿ ಕುಶಲತೆಯನ್ನು ಪ್ರತಿಪಾದಿಸುವ ಹೊಸ ವೀಡಿಯೊಗಳು ಹೊರಹೊಮ್ಮಿದಾಗ ಟಿಎಂಸಿಯ ಆರೋಪಗಳು ಮುನ್ನೆಲೆಗೆ ಬಂದವು.

### ಬಿಜೆಪಿ ಜಿಲ್ಲಾ ಕಾರ್ಯಾಲಯದ 'ಬಸವ ಜಯಂತಿ' ಕಾರ್ಯಕ್ರಮದಲ್ಲಿ ವಿ.ಪ ಸದಸ್ಯ ಎಸ್.ವಿ. ಸಂಕನೂರು

# ದಾಸೋಹದಿಂದ ನೆಮ್ಮದಿಯ ಬದುಕು



■ ವಿಜಯಸಾಕ್ಷಿ ಸುದ್ದಿ, ಗದಗ

ಬಸವಣ್ಣನವರ ಆಚಾರ-ವಿಚಾರಗಳನ್ನು ವಿದೇಶಿಗರು ಕೂಡಾ ಪಾಲಿಸುತ್ತಿದ್ದಾರೆ. ದಾಸೋಹ ಎಂದರೆ ಇಂದು ಮಠ-ಮಂದಿರಗಳಲ್ಲಿ ನಡೆಯುವ ಪ್ರಸಾದ ವಿತರಣೆ ಮಾತ್ರವಲ್ಲ, ದಾಸೋಹ ಎಂದರೆ ನಾವು ದುಡಿದಿದ್ದರಲ್ಲಿ ಅಲ್ಪವನ್ನಾದರೂ ಸಮಾಜಕ್ಕೆ ಅರ್ಪಿಸಬೇಕು. ದೀನ ದಲಿತರು, ಬಡವರು ಹಾಗೂ ಸಮಾಜದಲ್ಲಿ ತುಳಿತಕ್ಕೆ ಒಳಗಾದ ಜನತೆಗೆ ನಮ್ಮ ಆದಾಯದಲ್ಲಿ ಹಂಚಿದರೆ ಮನಸ್ಸಿಗೆ ನೆಮ್ಮದಿ ಸಿಗುತ್ತದೆ, ನೆಮ್ಮದಿಯ ಬದುಕು ನಮ್ಮದಾಗುತ್ತದೆ ಎಂದು ವಿಧಾನ ಪರಿಷತ್ ಸದಸ್ಯ ಎಸ್.ವ್ಹಿ. ಸಂಕನೂರ ಅಭಿಪ್ರಾಯಪಟ್ಟರು.

ಭಾರತೀಯ ಜನತಾ ಪಾರ್ಟಿಯ ಗದಗ ಜಿಲ್ಲಾ ಕಾರ್ಯಾಲಯದಲ್ಲಿ ಹಮ್ಮಿಕೊಂಡಿದ್ದ ವಿಶ್ವಗುರು, ಮಹಾಮಾನತವಾದಿ ಶ್ರೀ ಬಸವೇಶ್ವರರ ಜಯಂತಿ ಕಾರ್ಯಕ್ರಮದಲ್ಲಿ ಅವರುಉ ಮಾತನಾಡಿದರು.

ಜಿಲ್ಲಾ ವಕ್ತಾರ ಎಂ.ಎಂ. ಹಿರೇಮಠ ಮಾತನಾಡಿ, ಬಸವಣ್ಣನವರು ಕಾಯಕಕ್ಕೆ ಹೆಚ್ಚಿನ ಆದ್ಯತೆ ನೀಡಿದರು. ಕಾಯಕ ಎಂದರೆ ಕಸಬು, ಕೆಲಸ, ದುಡಿಮೆ, ವೃತ್ತಿ ಎಂದು ಹೇಳಿದರು. ಕಾಯಕವೇ ಕೈಲಾಸ ಎಂದು ನಂಬಿ ನಾವು ಮಾಡುವ ಯಾವುದೇ ಉದ್ಯೋಗವಿದ್ದರೂ ಅದರಲ್ಲಿ ಪ್ರಾಮಾಣಿಕತೆ, ನಿಷ್ಠುರತೆ ಇರಬೇಕು. ಇದನ್ನು ಬಿಟ್ಟು ಬೇರೆಯವರಿಗೆ ನಮ್ಮ ಕಾಯಕದಿಂದ ನೋವಾಗಬಾರದು ಎಂದರು.

ಹಿರಿಯರಾದ ಎಂ.ಎಸ್. ಕರೀಗೌಡ್ರ ಮಾತನಾಡಿ, ಬಸವಣ್ಣನವರ ವಚನಗಳನ್ನು, ಕನಕದಾಸರ, ಆದರ್ಶಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಕಾಯಕದಲ್ಲಿ ನಿರತನಾದರೆ ಗುರುದರ್ಶನವನ್ನು ಮರೆಯಬೇಕು, ಲಿಂಗ ಪೂಜೆಯಾದರೂ ಮರೆಯಬೇಕು, ಜಂಗಮ ಮುಂದಿದ್ದರೂ ಹಂಗು ಹರಿಯಬೇಕು, ಕಾಯಕಕ್ಕಿಂತ ಗುರು, ಲಿಂಗ, ಜಂಗಮ ಇವರ‍್ಯಾರೂ ದೊಡ್ಡವರಲ್ಲ. ಕಾಯಕದಲ್ಲಿ ಎಲ್ಲವೂ ಇದೆ ಎಂದರು.

ಈ ಸಂದರ್ಭದಲ್ಲಿ ಸಿದ್ದು ಪಲ್ಲೇದ, ಅಶೋಕ ಸಂಕಣ್ಣವರ, ಭೀಮಸಿಂಗ ರಾಠೋಡ, ಕೆ.ಕೆ. ಮಳಗೌಡ್ರ, ಕೆ.ಪಿ. ಕೊಟಿಗೌಡ್ರ, ಸುಧೀರ ಕಾಟಿಗರ, ಮಂಜುನಾಥ ಶಾಂತಗೇರಿ, ಸಂತೋಷ ಅಕ್ಕಿ, ರಾಜೇಶ ಕಟ್ಟಿಮನಿ, ಸಂತೋಷ ಕಲ್ಯಾಣಿ, ವಿಶ್ವನಾಥ ಶಿರಿಗಣ್ಣವರ, ಎಸ್.ಕೆ. ಉಮಚಗಿ, ರವಿ ಮಾನ್ವಿ, ಮಾಂತೇಶ ಬಾತಾಖಾನಿ, ಶಾಂತೇಶ ಚವಡಿ, ಯೋಗೇಶ್ವರಿ ಭಾವಿಕಟ್ಟಿ, ವಿನೋದ ಹಂಸನೂರ ಮುಂತಾದವರು ಭಾಗವಹಿಸಿದ್ದರು. ಬಿಜೆಪಿ ನಗರಾಧ್ಯಕ್ಷ ಅನಿಲ ಅಬ್ಬಿಗೇರಿ ಸ್ವಾಗತಿಸಿ ವಂದಿಸಿದರು. ರಮೇಶ ಸಜ್ಜಗಾರ ಕಾರ್ಯಕ್ರಮ ನಿರೂಪಿಸಿದರು.

ಜಿಲ್ಲಾ ಬಿಜೆಪಿ ಅಧ್ಯಕ್ಷ ತೋಟಪ್ಪ(ರಾಜು) ಕುರುಡಗಿ ಮಾತನಾಡಿ, 12ನೇ ಶತಮಾನದಲ್ಲಿ ಜಾತಿ, ಜಾತಿಯ ನಡುವೆ ಸಂಘರ್ಷಗಳಿದ್ದವು. ಯಾವ ಜಾತಿಯೂ ಮೇಲಲ್ಲ, ಕೀಳಲ್ಲ. ದಲಿತರಿಗೂ ಕೂಡ ಸಮಾಜದಲ್ಲಿ ಒಳ್ಳೆಯ ಸ್ಥಾನಮಾನ ಸಿಗುವ ಹಾಗೆ ಮಾಡಿದವರು ಬಸವಣ್ಣ. 12ನೇ ಶತಮಾನದಲ್ಲಿಯ ಶಿವಶರಣ-ಶರಣೆಯರು ಕಾಯಕ ದಾಸೊಹಗಳನ್ನು ನಂಬಿ ಅವುಗಳ ಸವಿಯನ್ನು ಅನುಭವಿಸಿ ಸಾರ್ಥಕ ಬದುಕನ್ನು ಸಾಧಿಸಿ ಮನುಕುಲಕ್ಕೆ ಮಾದರಿಯಾಗಿದ್ದಾರೆ. ಶರಣರು ಕಾಯಕ ದಾಸೋಹದ ಬಗ್ಗೆ ಕೇವಲ ವಚನಗಳನ್ನು ರಚಿಸಲಿಲ್ಲ. ಬದಲಿಗೆ ನುಡಿದಂತೆ ನಡೆದು ತಮ್ಮ ನಿತ್ಯ ಬದುಕಿನಲ್ಲಿ ಅಳವಡಿಸಿಕೊಂಡು ಬಾಳಿ ಬದುಕಿದರು. ಅವರ ತತ್ವ ಆಚರಣೆಗಳು ಇಂದಿಗೂ ನಮ್ಮ ಬದುಕಿಗೆ ದಾರಿದೀಪವಾಗಿದೆ ಎಂದರು.

## ಅಂದಾನಪ್ಪ ದೊಡ್ಡಮೇಟಿ ಪ್ರೌಢಶಾಲೆ ವಿದ್ಯಾರ್ಥಿಗಳ ಸಾಧನೆ





■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ಜಕ್ಕಲಿ ಗ್ರಾಮದ ಶ್ರೀ ಅಂದಾನಪ್ಪ ಜ್ಞಾನಪ್ಪ ದೊಡ್ಡಮೇಟಿ ಸರ್ಕಾರಿ ಪ್ರೌಢಶಾಲೆಯ 2023-24ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ, ಪರೀಕ್ಷೆಗೆ ಕುಳಿತ 42 ವಿದ್ಯಾರ್ಥಿಗಳಲ್ಲಿ 32 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು, ಶಾಲೆಯ ಒಟ್ಟು ಫಲಿತಾಂಶ ಶೇ. 76.19ರಷ್ಟು ಆಗಿದೆ ಎಂದು ಮುಖ್ಯೋಪಾಧ್ಯಾಯ ಬಿ.ಆರ್. ಗದುಗಿನ ಪ್ರಕಟಣೆಗೆ ತಿಳಿಸಿದ್ದಾರೆ.

ತೇಜಸ್ವಿನಿ ಬೆನಹಾಳ ಶೇ. 90.56 ಅಂಕದೊಂದಿಗೆ ಪ್ರಥಮ, ಶ್ರೇಯಾ ಗಾಣಿಗೇರ ಶೇ. 80.8ರಷ್ಟು ಅಂಕದೊಂದಿಗೆ ದ್ವಿತೀಯ, ಶ್ರೀಶೈಲಯ್ಯ ಧಡೇಸೂರಮಠ ಶೇ. 77.12ರಷ್ಟು ಅಂಕದೊಂದಿಗೆ ತೃತೀಯ ಸ್ಥಾನ ಪಡೆದು ಶಾಲೆಯ ಕೀರ್ತಿಯನ್ನು ಹೆಚ್ಚಿಸಿದ್ದಾರೆ. ಎಲ್ಲ ವಿದ್ಯಾರ್ಥಿಗಳಿಗೆ ಮುಖ್ಯೋಪಾಧ್ಯಾಯರು, ಎಸ್‌ಡಿಎಂಸಿ ಪದಾಧಿಕಾರಿಗಳು, ಶಿಕ್ಷಕರು ಸೇರಿದಂತೆ ಸಿಬ್ಬಂದಿ ಬಳಗದವರು ಅಭಿನಂದಿಸಿದ್ದಾರೆ.

## ಹೇಮರಡ್ಡಿ ಮಲ್ಲಮ್ಮ ಸದಾ ಸ್ಮರಣೀಯ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ರಡ್ಡಿ ಸಮಾಜದ ವತಿಯಿಂದ ಶಿವಶರಣೆ ಹೇಮರಡ್ಡಿ ಮಲ್ಲಮ್ಮನ ಜಯಂತ್ಯುತ್ಸವದ ನಿಮಿತ್ತ ಹಳ್ಳದಕೇರಿ ಓಣಿಯ ಮಾರುತಿ ದೇವಸ್ಥಾನದ ಹತ್ತಿರ ಮಲ್ಲಮ್ಮಳ ಭಾವಚಿತ್ರಕ್ಕೆ ಪೂಜೆ, ಅನ್ನಸಂತರ್ಪಣೆ ಹಾಗೂ ಸಂಜೆ ಸವಾಲ್-ಜವಾಬ್ ಭಜನಾ ಸ್ಪರ್ಧೆ ಏರ್ಪಡಿಸುವ ಮೂಲಕ ಆಚರಿಸಿದರು.

ಕಾರ್ಯಕ್ರಮದ ಸಾನ್ನಿಧ್ಯ ವಹಿಸಿದ್ದ ಕರೇವಾಡಿಮಠದ ಮಳೇಮಲ್ಲಿಕಾರ್ಜುನ ಸ್ವಾಮಿಗಳು ಮಾತನಾಡಿ, ಹೇಮರಡ್ಡಿ ಮಲ್ಲಮ್ಮ ಮಹಾಶಿವಶರಣೆಯಾಗಿ ಬೆಳಗಿದವರು. ಜೀವನ ಮೌಲ್ಯಗಳ ಮೂಲಕ ಮನುಕುಲಕ್ಕೆ ಅಮೂಲ್ಯ ಕಾಣಿಕೆಗಳನ್ನು ನೀಡಿದ್ದಾಳೆ. ಸ್ತ್ರೀಕುಲದ ಅನ್ವರ್ಥ ರತ್ನವಾಗಿ ಮಲ್ಲಮ್ಮಳ ಹೆಸರು ಶಾಶ್ವತವಾಗಿರುತ್ತದೆ. ಅವಳ ಜೀವನಾದರ್ಶಗಳು ಸಮಾಜಕ್ಕೆ ದಾರಿದೀಪವಾಗಿದ್ದು, ಇಂತಹ ಶ್ರೇಷ್ಠ ಶಿವಶರಣೆ ಸದಾ ಸ್ಮರಣೀಯ ಎಂದರು.

ಈ ವೇಳೆ ಸಮಾಜದ ಹಿರಿಯರಾದ ಶಂಕ್ರಪ್ಪ ಗೊರವರ, ಸಮಾಜದ ಅಧ್ಯಕ್ಷ ವಿರೂಪಾಕ್ಷಪ್ಪ ಅಮರಶೆಟ್ಟಿ, ಚಂದ್ರು ಹಾದಿಮನಿ, ಚಂದ್ರಪ್ಪ ಅಮರ ಶೆಟ್ಟಿ, ಮಂಜುನಾಥ ಮುಗಳಿ, ಚಂದ್ರು ಮುಗಳಿ, ಈಶ್ವರಪ್ಪ ಭೂತರಡ್ಡಿ, ಈಶ್ವರ ಹೊಸಮನಿ, ಮಂಜುನಾಥ ಗೊರವರ, ಮಹೇಶ ಹಾದಿಮನಿ, ವೆಂಕನಗೌಡ ಪಾಟೀಲ, ಬಾಬಣ್ಣ ಅಳವಡಮಿ, ಗಿರೀಶ ಚೌರಡ್ಡಿ, ಹನುಮಂತಗೌಡ ಪಾಟೀಲ ಹನಮಂತಪ್ಪ ದಾನಿ, ಅಮರೇಶ ಕೋಣನವರ ಸೇರಿದಂತೆ ರಡ್ಡಿ ಸಮಾಜದ ಗಣ್ಯರು ಉಪಸ್ಥಿತರಿದ್ದರು.

## ಬಸವ ಕೇಂದ್ರದಲ್ಲಿ ಬಸವ ಜಯಂತಿ



■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಕಳಸಾಪೂರ ಗ್ರಾಮದ ಬಸವ ಕೇಂದ್ರದಲ್ಲಿ ಷಟಸ್ಥಲ್ ಧ್ವಜಗೀತೆಯೊಂದಿಗೆ ವಿಶ್ವಗುರು ಬಸವಣ್ಣನವರ ಜಯಂತಿ ಕಾರ್ಯಕ್ರಮವನ್ನು ಪುಷ್ಪವೃಷ್ಠಿ ಮೂಲಕ ಗ್ರಾ.ಪಂ ಸದಸ್ಯ ಕಿರಣಕುಮಾರ ಕೋರ್ಪಡೆ ನೆರವೇರಿಸಿದರು.

ಬಸವ ಕೇಂದ್ರದ ಕಾರ್ಯಾಧ್ಯಕ್ಷ, ಕನ್ನಡಾಭಿಮಾನಿ, ಮಲ್ಲಿಕಾರ್ಜುನ ಖಂಡಮ್ಮನವರ ತಮ್ಮ ದ್ವಿಚಕ್ರ ವಾಹನದೊಂದಿಗೆ ಸಂಚರಿಸಿ, ವಿಶ್ವಗುರು ಬಸವಣ್ಣನವರ ವಚನಗಳ ಭಿತ್ತಿ ಪತ್ರಗಳನ್ನು ಗದಗ ನಗರದ ಮುಳಗುಂದ ನಾಕಾ, ಹುಡ್ಕೋ ಕಾಲೋನಿ, ಹುಯಿಳಗೋಳ ನಾರಾಯಣರಾವ ವೃತ್ತ, ಪಂ. ಪುಟ್ಟರಾಜ ಗವಾಯಿಗಳ ವೃತ್ತ, ಗಾಂಧಿ ಸರ್ಕಲ್‌ಗಳಲ್ಲಿ ವಿತರಿಸಿದರು.

ಕಾರ್ಯಕ್ರಮದಲ್ಲಿ ಅನಸೂಯಾ ಖಂಡಮ್ಮನವರ, ಜಯಶ್ರೀ ಖಂಡಮ್ಮನವರ, ಶಿಲ್ಪಾ ಖಂಡಮ್ಮನವರ, ಸವಿತಾ ಗಂಗಾಧರ ಖಂಡಮ್ಮನವರ, ಬಾಳನಗೌಡ ಪಾಟೀಲ, ರಾಮಪ್ಪ ಮಹಾದೇವಪ್ಪ ಅಣ್ಣಿಗೇರಿ, ಸಂತೋಷ ನಾಯ್ಕರ, ಕೊಟ್ರೇಶ ಓಲಿ, ಪಿ.ಡಿ.ಓ. ಕಳಸಾಪೂರ, ಬಸವರಾಜ ಹಗೇದಾಳ, ಗಣೇಶ ಚನ್ನಪ್ಪ ಚವ್ಹಾಣ, ಶರಣಪ್ಪ ಹುಯಿಲಗೋಳ, ಇಸ್ಮಾಯಿಲ್ ಜಾಲಿಹಾಳ, ಹುಚ್ಚಪ್ಪ ಸಣ್ಣಕ್ಕಿ, ಬಸವರಾಜ ಹೂಗಾರ, ಬಸವ ಕೇಂದ್ರದ ಎಲ್ಲ ಪದಾಧಿಕಾರಿಗಳು ಹಾಗೂ ಸರ್ವ ಸದಸ್ಯರು ಉಪಸ್ಥಿತರಿದ್ದರು.

## ಅಕ್ಕನ ಬಳಗದಲ್ಲಿ ಬಸವ ಜಯಂತಿ



■ ವಿಜಯಸಾಕ್ಷಿ ಸುದ್ದಿ, ಗದಗ

ಅಕ್ಕನ ಬಳಗದಲ್ಲಿ ಬಸವ ಜಯಂತಿ ನಿಮಿತ್ತ ಬಸವಣ್ಣನವರಿಗೆ ತೊಟ್ಟಿಲ ಸೇವೆ, ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಉಡಿ ತುಂಬುವ ಸೇವೆಯನ್ನು ನಾಗರತ್ನಾ ಹುಬ್ಬಳ್ಳಿಮಠ ಅವರು ವಹಿಸಿಕೊಂಡಿದ್ದರು.

ಕಾರ್ಯಕ್ರಮದಲ್ಲಿ ಅಕ್ಕನ ಬಳಗದ ಅಧ್ಯಕ್ಷೆ ಲಲಿತಾ ಬಾಳೆಹಳ್ಳಿಮಠ, ಕಾರ್ಯದರ್ಶಿ ರೇಣುಕಾ ಅಮಾತ್ಯ, ಖಜಾಂಚಿ ಜಯಲಕ್ಷ್ಮೀ ಬಳ್ಳಾರಿ, ಟ್ರಸ್ಟಿಗಳಾದ ಪ್ರೇಮಾ ಮೇಟಿ, ಶಾಂತಾ ಸಂಕನೂರ, ಸುವರ್ಣ ವಸ್ತ್ರದ, ಸದಸ್ಯರಾದ ಶಿವಲೀಲಾ ಅಕ್ಕಿ, ವಿಜಯಲಕ್ಷ್ಮೀ ಮಾನ್ವಿ, ಸುವರ್ಣ ಮದರಿಮಠ, ಸುವರ್ಣ ಹೊಸಂಗಡಿ ಮುಂತಾದವರು ಪಾಲ್ಗೊಂಡಿದ್ದರು.

## ಬಸವಣ್ಣನವರ ತತ್ವಗಳನ್ನು ರೂಢಿಸಿಕೊಳ್ಳಿ



■ ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಪ್ರತಿ ಕುಟುಂಬದಲ್ಲಿ ಶಾಂತಿ, ಸಹನೆಯ, ಹೊಂದಾಣಿಕೆಯ ಸಮಾನ ಮನಸ್ಥಿತಿ ಇದ್ದಲ್ಲಿ ಮನೆಯು ನೆಮ್ಮದಿಯ ತಾಣವಾಗುತ್ತದೆ ಎಂದು ಹೂವಿನಹಡಗಲಿಯ ಗವಿಸಿದ್ದೇಶ್ವರ ಸಂಸ್ಥಾನ ಮಠದ ಹಿರಿ ಶಾಂತವೀರ ಮಹಾಸ್ವಾಮಿಗಳು ಕಿವಿಮಾತು ಹೇಳಿದರು.

ತಾಲೂಕಿನ ಅರಸೀಕೆರೆ ಗ್ರಾಮದ ಕೋಲಶಾಂತೇಶ್ವರ ಜನಕಲ್ಯಾಣ ಕೇಂದ್ರದಿಂದ ಬಸವ ಜಯಂತಿ ಪ್ರಯುಕ್ತ ಶುಕ್ರವಾರ ನಡೆದ 40ನೇ ವರ್ಷದ 34 ಜೋಡಿಗಳ ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಶ್ರೀಗಳು ಮಾತನಾಡಿದರು.

ಮದುವೆಯ ನಂತರ ಬರಿ ಸ್ವಾರ್ಥದಿಂದ ಜೀವಿಸದೆ ಅತ್ತೆ-ಮಾವಂದಿರನ್ನು ತಂದೆ-ತಾಯಿಯ ರೀತಿಯಲ್ಲಿ ನೋಡಿಕೊಳ್ಳಬೇಕು. ಆಧುನಿಕ ಸಮಾಜದಲ್ಲಿ ಅವಿಭಕ್ತ ಕುಟುಂಬಗಳು ಕಣ್ಮರೆಯಾಗುತ್ತಿವೆ. ಒಗ್ಗಟ್ಟಿನಿಂದ ಇದ್ದಲ್ಲಿ ಜಗತ್ತನ್ನು ಗೆಲ್ಲಬಹುದು. ನವದಂಪತಿಗಳು ಬಸವಣ್ಣನವರ ತತ್ವಗಳನ್ನು ಜೀವನದಲ್ಲಿ ರೂಢಿಸಿಕೊಳ್ಳಬೇಕು ಎಂದರು.

ಕೋಲಶಾಂತೇಶ್ವರ ಮಠದ ವತಿಯಿಂದ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದವರಿಗೆ ಸೇವಾ ಪ್ರಶಸ್ತಿ ಹಾಗೂ ಬಸವ ಗುರುಕಿರಣ ಪ್ರಶಸ್ತಿಯನ್ನು ನೀಡಿ ಗೌರವಿಸಲಾಯಿತು. ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆಗಳಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಶಾಂತಲಿಂಗ ದೇಶೀಕೇಂದ್ರ ಮಹಾಸ್ವಾಮಿಗಳು ಕಾರ್ಯಕ್ರಮದ ಸಾನ್ನಿಧ್ಯ ವಹಿಸಿದ್ದರು.

ವೈ.ಡಿ. ಅಣ್ಣಪ್ಪ, ಪ್ರಶಾಂತ್ ಪಾಟೀಲ್, ವೃಷಭೇಂದ್ರಯ್ಯ, ಇಟಗಳ್ಳಿ ಬಸವರಾಜ್, ಹೆಚ್ ಕೊಟ್ರೇಶ್, ಕೆ. ಬಸವರಾಜ್, ಎಂ. ಸುರೇಶ್, ವೆಂಕಟೇಶ್, ಮರಿಯಪ್ಪ ಪೂಜಾರ್, ಎ.ಹೆಚ್. ನವೀನ್ ಮುಂತಾದವರಿದ್ದರು.

### ಮಾಲ್ಡೀವ್ಸ್‌ನೊಂದಿಗೆ ಜೈಶಂಕರ್ ಮಾತುಕತೆ

## ದ್ವೀಪ ರಾಷ್ಟ್ರದಿಂದ ಸೈನಿಕರನ್ನು ಸಂಪೂರ್ಣವಾಗಿ ಹಿಂತೆಗೆದುಕೊಂಡ ಭಾರತ



■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ವಿದೇಶಾಂಗ ವ್ಯವಹಾರಗಳ ಸಚಿವ ಎಸ್ ಜೈಶಂಕರ್ ಅವರು ಮಾಲ್ಡೀವ್ಸ್ ಸಚಿವ ಮೂಸಾ ಜಮೀರ್ ಅವರನ್ನು ಭೇಟಿ ಮಾಡಿದ ಒಂದು ದಿನದ ನಂತರ, ಅಧ್ಯಕ್ಷ ಮೊಹಮದ್ ಮುಯಿಝು ಅವರು ನಿಗದಿಪಡಿಸಿದ ಮೇ 10 ರ ಗಡುವಿನ ಮುಂಚೆಯೇ ಭಾರತವು ದ್ವೀಪ ರಾಷ್ಟ್ರದಿಂದ ತನ್ನ ಎಲ್ಲ ಸೈನಿಕರನ್ನು ಹಿಂತೆಗೆದುಕೊಳ್ಳುವಿಕೆಯನ್ನು ಪೂರ್ಣಗೊಳಿಸಿದೆ.

ಮಾಲ್ಡೀವ್ಸ್‌ನಲ್ಲಿ ಬೀಡುಬಿಟ್ಟಿದ್ದ ಭಾರತೀಯ ಸೈನಿಕರ ಕೊನೆಯ ಬ್ಯಾಚ್ ಅನ್ನು ವಾಪಸ್ ಕಳುಹಿಸಲಾಗಿದೆ ಎಂದು ಹೀನಾ ವಲೀದ್ ದೃಢಪಡಿಸಿದ್ದಾರೆ ಎಂದು ಅಧ್ಯಕ್ಷರ ಕಚೇರಿಯ ಮುಖ್ಯ ವಕ್ತಾರರು ತಿಳಿಸಿದ್ದಾರೆ ಎಂದು ರಾಷ್ಟ್ರೀಯ ಮಾಧ್ಯಮಗಳು ವರದಿ ಮಾಡಿವೆ.

ಭಾರತವು ಈ ಹಿಂದೆ ಉಡುಗೊರೆಯಾಗಿ ನೀಡಿದ್ದ ಎರಡು ಹೆಲಿಕಾಪ್ಟರ್‌ಗಳು, ಡೋರ್ನಿಯರ್ ವಿಮಾನಗಳನ್ನು ನಿರ್ವಹಿಸಲು ಮಾಲ್ಡೀವ್ಸ್‌ನಲ್ಲಿ ನೆಲೆಸಿರುವ ಸುಮಾರು 89 ಭಾರತೀಯ ಮಿಲಿಟರಿ ಸಿಬ್ಬಂದಿಯನ್ನು ವಾಪಸು ಕಳುಹಿಸುವುದು 2023 ರಲ್ಲಿ ಅವರ ಅಧ್ಯಕ್ಷೀಯ ಪ್ರಚಾರದ ಸಮಯದಲ್ಲಿ ಮುಯಿಝು ಅವರ ಪ್ರಮುಖ ಪ್ರತಿಜ್ಞೆಯಾಗಿತ್ತು.

ಠಿಕಾಣಿ ಹೂಡಿರುವ ಸೈನಿಕರ ಸಂಖ್ಯೆಯ ವಿವರಗಳನ್ನು ನಂತರ ಬಹಿರಂಗಪಡಿಸಲಾಗುವುದು ಎಂದು ವಲೀದ್ ಹಂಚಿಕೊಂಡಿದ್ದಾರೆ. ಈ ಹಿಂದೆ 51 ಸೈನಿಕರನ್ನು ಸೋಮವಾರ ಭಾರತಕ್ಕೆ ವಾಪಸ್ ಕಳುಹಿಸಲಾಗಿದೆ ಎಂದು ಅದರ ಸರ್ಕಾರ ಘೋಷಿಸಿತ್ತು. ಗುರುವಾರ ನವದೆಹಲಿಯಲ್ಲಿ ನಡೆದ ಮಾಧ್ಯಮಗೋಷ್ಠಿಯಲ್ಲಿ ವಿದೇಶಾಂಗ ವ್ಯವಹಾರಗಳ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಭಾರತೀಯ ಸಿಬ್ಬಂದಿಯ ಮೊದಲ ಮತ್ತು ಎರಡನೇ ಬ್ಯಾಚ್‌ಗಳು ಹಿಂತಿರುಗಿದ್ದಾರೆ ಎಂದು ದೃಢಪಡಿಸಿದರು.

## ಜಗಜ್ಯೋತಿ ಬಸವೇಶ್ವರ ಜಯಂತಿ ಆಚರಣೆ



■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಡಿ.ಎಚ್. ಕಬಾಡಿ ಕಟ್ಟಡದಲ್ಲಿನ ಶ್ರದ್ಧಾ ಸ್ವರ ಸಂಗೀತ ವೆಲ್ಫೇರ್ ಟ್ರಸ್ಟ್ ಸಂಗೀತ ವಿದ್ಯಾಲಯದಲ್ಲಿ ಶ್ರೀ ಜಗಜ್ಯೋತಿ ಬಸವೇಶ್ವರ ಜಯಂತಿಯನ್ನು ವಿಜೃಂಭಣೆಯಿಂದ ಆಚರಿಸಲಾಯಿತು.

ಸಭೆಯ ಅಧ್ಯಕ್ಷತೆಯನ್ನು ನಿವೃತ್ತ ಶಿಕ್ಷಕ ಎಂ.ಎಸ್. ಚಿನ್ನೂರ ವಹಿಸಿ ಬಸವಣ್ಣನವರ ಕುರಿತಾಗಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಸಂಗೀತ ವಿದ್ವಾಂಸ ಪಂ. ವೆಂಕಟೇಶ್ ಅಲ್ಕೋಡ್ ಕಾರ್ಯಕ್ರಮ ನಡೆಸಿಕೊಟ್ಟರು. ಸಂಗೀತ ವಿದ್ಯಾಲಯದ ಮಕ್ಕಳು, ಹೇಮಾ ಅಲ್ಕೋಡ ಬಸವಣ್ಣನವರ ವಚನಗಳನ್ನು ಹಾಡಿದರು.

ಟ್ರಸ್ಟಿ ಅಧ್ಯಕ್ಷ ಉಜ್ವಲ್ ಕಬಾಡಿ ನೇತೃತ್ವದಲ್ಲಿ ನಡೆದ ಕಾರ್ಯಕ್ರಮದಲ್ಲಿ ಕಾರ್ಯಾಧ್ಯಕ್ಷೆ ಜ್ಯೋತಿ ಉ.ಕಬಾಡಿ, ಸಂಗೀತ ಶಿಕ್ಷಕ ಪರಸಪ್ಪ ಭಜಂತ್ರಿ, ಬಸವದಳದ ಸದಸ್ಯರಾದ ಎಸ್.ಎ. ಮುಗದ, ಸರೋಜಾ ಎಸ್.ಮುಗದ, ಮಾರುತಿ ಬಂಡಿವಡ್ಡರ, ಸಂಜೀವಿನಿ ಬಂಡಿವಡ್ಡರ ಮುಂತಾದವರು ಉಪಸ್ಥಿತರಿದ್ದರು.

## ಇಂದಿನಿಂದ ಗ್ರಾಮದೇವತೆ ಜಾತ್ರಾಮಹೋತ್ಸವ

■ ವಿಜಯಸಾಕ್ಷಿ ಸುದ್ದಿ, ಗದಗ

ಪ್ರತಿ 11 ವರ್ಷಗಳಿಗೊಮ್ಮೆ ನಡೆಯುವ ತಾಲೂಕಿನ ಕೋಟುಮಚಗಿಯ ಗ್ರಾಮದೇವತೆ ಜಾತ್ರಾಮಹೋತ್ಸವ ಮೇ 11 ರಿಂದ 13 ರ ವರೆಗೆ ನಡೆಯಲಿದೆ.

ಮೇ 11ರಂದು ಬೆಳಗ್ಗೆ 6 ಗಂಟೆಗೆ ಧ್ವಜಾರೋಹಣ ಕಾರ್ಯಕ್ರಮ ನೆರವೇರಲಿದೆ. 6.30ಕ್ಕೆ ಕಳಸಾರೋಹಣವನ್ನು ನರೇಗಲ್ಲ ಹಿರೇಮಠದ ಮಲ್ಲಿಕಾರ್ಜುನ ಶಿವಾಚಾರ್ಯರು, ಶಿವಯೋಗ ಮಂದಿರದ ಸಿದ್ದರಾಮೇಶ್ವರ ಶ್ರೀಗಳು ನಡೆಸಿಕೊಡುವರು.

ಸಂಜೆ 6.30ಕ್ಕೆ ನಡೆಯುವ ಧರ್ಮಸಭೆಯಲ್ಲಿ ಶಿವಯೋಗ ಮಂದಿರದ ಸಿದ್ಧರಾಮೇಶ್ವರ ಶ್ರೀಗಳು, ರೋಣ ಗುಲಗಂಜಿ ಮಠದ ಗುರುಪಾದ ದೇವರು, ನರೇಗಲ್ಲಿನ ಮಲ್ಲಿಕಾರ್ಜುನ ಶಿವಾಚಾರ್ಯರು ಸಾನ್ನಿಧ್ಯ ವಹಿಸುವರು. ದಿವಾಕರ ಶ್ರೀಗಳು, ಹರ್ಲಾಪುರದ ಮುತ್ತಪ್ಪ ಅಜ್ಜನವರು ಸಮ್ಮುಖ ವಹಿಸುವರು. ಗಂಗಾಧರಯ್ಯ ಹಿರೇಮಠ, ಫಕೀರಯ್ಯ ಹಿರೇಮಠ ನೇತೃತ್ವ ವಹಿಸುವರು.

ಮೇ 12 ರಂದು ಸಂಜೆ 6.30ಕ್ಕೆ ಧರ್ಮಸಭೆ ನಡೆಯಲಿದ್ದು, ಹಾಲಕೆರೆ ಸಂಸ್ಥಾನ ಮಠದ ಮುಪ್ಪಿನ ಬಸವಲಿಂಗ ದೇವರು, ಗದಗ ವೀರೇಶ್ವರ ಪುಣ್ಯಾಶ್ರಮದ ಕಲ್ಲಯ್ಯಜ್ಜನವರು ಸಾನ್ನಿಧ್ಯ ವಹಿಸುವರು. ವೀರೇಂದ್ರ ಶ್ರೀಗಳು, ನವಲಗುಂದದ ಅಜಾತ ನಾಗಲಿಂಗ ಶ್ರೀಗಳು ಸಮ್ಮುಖ ವಹಿಸುವರು. ಗಂಗಾಧರಯ್ಯ ಹಿರೇಮಠ, ಫಕೀರಯ್ಯ ಹಿರೇಮಠ ನೇತೃತ್ವ ವಹಿಸುವರು. ರಾತ್ರಿ 10 ಗಂಟೆಗೆ ಕುಷ್ಟಗಿಯ ನವಗ್ರಹ ಮೆಲೋಡಿಸ್ ವತಿಯಿಂದ ರಸಮಂಜರಿ ಕಾರ್ಯಕ್ರಮ ನಡೆಯಲಿದೆ.

ಮೇ 13 ರಂದು ಸಂಜೆ 6.30 ಕ್ಕೆ ನಡೆಯುವ ಧರ್ಮಸಭೆಯಲ್ಲಿ ಭೈರನಹಟ್ಟಿ ದೊರೆಸ್ವಾಮಿ ವಿರಕ್ತಮಠದ ಶಾಂತಲಿಂಗ ಶ್ರೀಗಳು, ಜಿಗಳೂರಿನ ಸಿದ್ದೇಶ್ವರ ಶ್ರೀಗಳು ಸಾನ್ನಿಧ್ಯ ವಹಿಸುವರು. ಶಿರೋಳ ಗವಿಮಠದ ಎಚ್ಚರ ಶ್ರೀಗಳು ಸಮ್ಮುಖ ವಹಿಸುವರು. ಗಂಗಾಧರಯ್ಯ ಹಿರೇಮಠ, ಫಕೀರಯ್ಯ ಹಿರೇಮಠ ನೇತೃತ್ವ ವಹಿಸುವರು. ರಾತ್ರಿ 9 ಗಂಟೆಗೆ ಬೆಂಗಳೂರಿನ ಚಂದನಾ ಹಿರೇಮಠ ಅವರಿಂದ ಭರತನಾಟ್ಯ ನೆರವೇರಲಿದೆ ಎಂದು ಗ್ರಾಮದೇವತೆ ಜಾತ್ರಾ ಮಹೋತ್ಸವ ಸಮಿತಿಯ ಪ್ರಕಟಣೆ ತಿಳಿಸಿದೆ.

## ನಿಧನ ವಾರ್ತೆ

### ನೂರ್‌ಜಹಾನ್ ದಂಡಿನ



ಗದಗ: ನಗರದ ಜಾಕೀರ ಹುಸೇನ್ ಕಾಲೋನಿಯ ಮುಸ್ಲಿಂ ಸಮಾಜದ ಗಣ್ಯರಾದ ಜನಾಬ್ ಇಸ್ಮಾಯಿಲ್ ಸಾಹೇಬ್. ಮೆಹಬೂಬ್ ಸಾಬ. ದಂಡಿನ ಇವರ ಧರ್ಮಪತ್ನಿ ಶ್ರೀಮತಿ ನೂರ್ ಜಹಾನ್( 42)

ಇವರು ಶುಕ್ರವಾರ ಸಂಜೆ ನಿಧನರಾದರು.

ಮೃತರ ಅಂತಿಮಯಾತ್ರೆ ದಿ.11/05/2024ರ ಶನಿವಾರ ಬೆಳಿಗ್ಗೆ 11ಗಂಟೆಗೆ ಮೃತರ ಸ್ವ ಗೃಹ ಜಾಕೀರ್ ಹುಸೇನ್ ಕಾಲೋನಿಯಿಂದ ಹೊರಟು ಡಂಬಳ ನಾಕಾ ಖಬರಸ್ತಾನದಲ್ಲಿ ಅಂತ್ಯಕ್ರಿಯೆ ಜರುಗಲಿದೆ.

ಮೃತರು ಪತಿ, ಮೂವರು ಮಕ್ಕಳು, ತಂದೆ, ಅತ್ತೆ, ಮಾವ, ಸಹೋದರ, ಸಹೋದರಿಯರು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ.

### ಸಾಯಿಬಾಬಾರ ಧುನಿ ಶಿಲಾನ್ಯಾಸ, ಶ್ರೀ ಸಾಯಿ ಛಾಯಾಛತ್ರ ಉದ್ಘಾಟನೆ

# ಭಾರತದ ಸಂಸ್ಕಾರ, ಸಂಸ್ಕೃತಿ ಮಾದರಿಯಾಗಿದೆ

■ ವಿಜಯಸಾಕ್ಷಿ ಸುದ್ದಿ, ಗದಗ

ಅತ್ಯುನ್ನತವಾದ ಸಂಸ್ಕಾರ, ಸಂಸ್ಕೃತಿಗೆ ಜಗತ್ತಿನಲ್ಲಿಯೇ ಹೆಸರಾಗಿರುವ ಭಾರತ-ಕ್ಕೆ ತನ್ನದೇ ಆದ ಹಿರಿಮೆ-ಗರಿಮೆಯ ಸ್ಥಾನವಿದೆ ಎಂದು ಹೊಸಳ್ಳಿಯ ಬೂದೀಶ್ವರ ಸಂಸ್ಥಾನಮಠದ ಜ.ಬೂದೀಶ್ವರ ಮಹಾಸ್ವಾಮಿಗಳು ಅಭಿಪ್ರಾಯಪಟ್ಟರು.

ಶುಕ್ರವಾರ ಗದುಗಿನ ಶಿರಡಿ ಸಾಯಿಬಾಬಾ ದೇವಸ್ಥಾನದ 17ನೇ ವಾರ್ಷಿಕೋತ್ಸವದ ನಿಮಿತ್ತ ಗದಗ-ಬೆಟಗೇರಿಯ ಶ್ರೀ ಶ್ರೀ ಶಿರಡಿ ಸಾಯಿಬಾಬಾ ಸತ್ಸಂಗ ಏರ್ಪಡಿಸಿದ್ದ ಶ್ರೀ ಶಿರಡಿ ಸಾಯಿಬಾಬಾರ ಧುನಿ ಶಿಲಾನ್ಯಾಸ, ಶ್ರೀ ಸಾಯಿ ಛಾಯಾಛತ್ರ ಉದ್ಘಾಟನಾ ಸಮಾರಂಭದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ತನಗರಿವಿಲ್ಲದೆ ಜಗತ್ತು ಭಾರತಕ್ಕೆ ಕೈಮುಗಿಯುತ್ತದೆ. ಇದಕ್ಕೆ ಕಾರಣ ಭಾರತದ ಸಂಸ್ಕಾರ, ಸಂಸ್ಕೃತಿ. ಮಹಾನ್ ತಪಸ್ವಿಗಳು, ತತ್ವಜ್ಞಾನಿಗಳು, ಧರ್ಮ ಗುರುಗಳು ಭದ್ರವಾದ ತತ್ವ ಸಂದೇಶ, ಸಂಸ್ಕಾರ, ಸಂಸ್ಕೃತಿಯನ್ನು ರೂಢಿಸಿದ್ದಾರೆ. ಜಗತ್ತು ಹೆಣ್ಣನ್ನು ಕೇವಲ ಭೋಗದ ವಸ್ತು ಎಂದುಕೊಳ್ಳುತ್ತಿದ್ದರೆ, ಆ ಹೆಣ್ಣಿನಲ್ಲಿ ತಾಯಿತನವನ್ನು, ದೈವತ್ವವನ್ನು, ಸಹೋದರತ್ವವನ್ನು ಕಂಡ ದೇಶ ಜಗತ್ತಿನ ಭೂಪಟದಲ್ಲಿ ಎಲ್ಲಿಯಾದರೂ ಇದ್ದರೆ ಅದು ನಮ್ಮ ಹೆಮ್ಮೆಯ ಭಾರತದಲ್ಲಿ ಮಾತ್ರ. ಅಂತಹ ಸಂಸ್ಕಾರ, ಸಂಸ್ಕೃತಿ ನಮ್ಮಲ್ಲಿದೆ ಎಂದರು.

ಧರ್ಮದ ಹಾದಿಯಲ್ಲಿ ನಾವು ಮುನ್ನಡೆದರೆ ಧರ್ಮ ಎಂದಿಗೂ ನಮ್ಮನ್ನು ಕೈಬಿಡದು. ಧರ್ಮಕಾರ್ಯ-ಪುಣ್ಯಕಾರ್ಯದ ಡಿಪಾಸಿಟ್ ಇದ್ದರೆ ಧರ್ಮ-ಪುಣ್ಯ ನಮ್ಮನ್ನು ರಕ್ಷಿಸುತ್ತದೆ. ಪಾಪ ಕಳೆದುಕೊಳ್ಳಲು ಪುಣ್ಯದ ಕೆಲಸ ಮಾಡಬೇಕಷ್ಟೇ. ಎಲ್ಲರೂ ದಾನ, ಧರ್ಮ, ಪುಣ್ಯದ ಕೆಲಸ ಮಾಡಿ ಎಂದರಲ್ಲದೆ, ಗದುಗಿನ ಶಿರಡಿ ಸಾಯಿಬಾಬಾ ಮಂದಿರ ಇಂತಹ ಕಾರ್ಯಕ್ಕೆ ಮುಂಚೂಣಿಯಲ್ಲಿದೆ. ಇಲ್ಲಿ ಧರ್ಮವಂತರು ಒಗ್ಗಟ್ಟಿನಿಂದ ಒಳ್ಳೆ ಕೆಲಸ ಮಾಡುತ್ತಿದ್ದಾರೆ. ಸಾಯಿಬಾಬಾ ಮಂದಿರ ಸಾಕಷ್ಟು ಅಭಿವೃದ್ಧಿಯಾಗಿದೆ ಧರ್ಮ ಜಾಗೃತಿ, ಜನ ಜಾಗೃತಿ ಮೂಡಿಸುವ ಕಾರ್ಯ ಮುನ್ನಡೆಯಲಿ ಎಂದರು.

ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಶ್ರೀ ಸಾಯಿ ಸಂಸ್ಥಾನ ಶಿರಡಿ ಕ್ಷೇತ್ರದ ಸೇವಾ ನಿವೃತ್ತ ಪುರೋಹಿತ ಬಾಳಾಸಾಹೇಬ ಜೋಶಿ, ಶ್ರೀ ಶಿರಡಿ ಸಾಯಿಬಾಬಾರ ಧುನಿ ಶಿಲಾನ್ಯಾಸ, ಭೂಮಿ ಪೂಜೆಯ ಧಾರ್ಮಿಕ ಸಾಂಪ್ರದಾಯಿಕ ವಿಧಿವಿಧಾನ ನೆರವೇರಿಸಿ ಮಾತನಾಡಿ, ಶೃದ್ಧಾಭಕ್ತಿಯಿಂದ ಸ್ಮರಣೆ, ಸಾಮಾಜಿಕ, ಧಾರ್ಮಿಕ ಕಾರ್ಯದಲ್ಲಿ ಮುನ್ನಡೆದರೆ ಬಾಬಾ ಶುಭಾಶೀರ್ವದಿಸಿ ಮುನ್ನಡೆಸುವರು ಎಂದರಲ್ಲದೆ ಗದುಗಿನ ಬಾಬಾ ಮಂದಿರ ಸುಂದರವಾಗಿ ನಿರ್ಮಾಣಗೊಂಡಿದೆ. ಭಕ್ತರನ್ನು ಆಕರ್ಷಿಸಿ ಸದ್ಭಾವನೆ ಮೂಡಿಸುತ್ತಿರುವದು ಅಭಿನಂದನೀಯ ಎಂದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಶಿರಡಿ ಸಾಯಿಬಾಬಾ ಸತ್ಸಂಗದ ಅಧ್ಯಕ್ಷ ಮಹೇಶಗೌಡ ತಲೇಗೌಡ್ರ ಸಾಯಿಬಾಬಾ ಮಂದಿರದ ಧರ್ಮ ಕಾರ್ಯಗಳನ್ನು ವಿವರಿಸಿದರು. ಡಾ. ಎಸ್.ಬಿ. ಶೆಟ್ಟರ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯದರ್ಶಿ ರವಿಶಂಕರ ಚಿಂಚಲಿ ನಿರೂಪಿಸಿ ವಂದಿಸಿದರು.

ವೇದಿಕೆಯ ಮೇಲೆ ಶಿರಡಿ ಸಾಯಿಬಾಬಾ ಸತ್ಸಂಗದ ಮಾಜಿ ಅಧ್ಯಕ್ಷ ಗಂಗಣ್ಣ ಕೋಟಿ, ಶಿರಡಿಯ ಅರ್ಚಕ ಅವಿನಾಶ ಸುಲಾಖೆ, ರಘುವೀರ ಫತ್ತೇಪೂರ, ಡಾ.ಎಸ್.ಬಿ.ಶೆಟ್ಟರ ಉಪಸ್ಥಿತರಿದ್ದರು. ಸಮಾರಂಭದಲ್ಲಿ ಐ.ಕೆ. ಬಲೂಚಿಗಿ, ಕೆ.ನಾಗೇಶರಾವ್, ಉಮೇಶ ನಾಲ್ವಾಡ, ಸಂಜಯ ರೊದ್ದಂ, ದೀಪಕ ಸುಲಾಖೆ, ಡಾ. ಎಸ್.ಡಿ. ಯರಗೇರಿ, ಸಿದ್ದಣ್ಣ ಗೌರಿಪುರ, ರಾಮಣ್ಣ ಕಾಶಪ್ಪನವರ, ರವಿರಾಜ ಕೋಟಿ, ಸದಾಶಿವಪ್ಪ ವಾಲಿ, ಯಲ್ಲೋಸಾ ಹಬೀಬ, ರವಿಪ್ರಕಾಶ ರಡ್ಡಿ, ದುಂಡಪ್ಪ ಮಲ್ಲಾಡದ, ಜಗದೀಶ ಪೂಜಾರ ಸೇರಿದಂತೆ ಸಾಯಿಬಾಬಾ ಭಕ್ತಾಧಿಗಳು ಪಾಲ್ಗೊಂಡಿದ್ದರು.




ದೇವಮಾನವರಾಗಿದ್ದ ಶಿರಡಿ ಸಾಯಿಬಾಬಾ ಅವರು ಸಕಲರಲ್ಲಿ, ಸಕಲ ಪ್ರಾಣಿಜೀವಿಗಳಲ್ಲಿ ದೇವರ ಸ್ವರೂಪವನ್ನು ಕಾಣಬೇಕು. ಸಂಕಷ್ಟದಲ್ಲಿರುವವರಿಗೆ, ನಿರ್ಗತಿಕರಿಗೆ ಸಹಾಯ ಮಾಡಬೇಕು, ದಾನಧರ್ಮ ಮಾಡಬೇಕು ಎಂದು ಬೋಧಿಸುವ ಮೂಲಕ 'ಸಬ್ ಕಾ ಮಾಲೀಕ ಏಕ್ ಹೈ' ಎಂದು ಎಲ್ಲರಲ್ಲಿ ಸದ್ಭಾವನೆ ಮೂಡಿಸಿದವರು. ಬಾಬಾ ಸಂಕಷ್ಟದಲ್ಲಿರುವವರನ್ನು ಸಂರಕ್ಷಿಸು, ನೆರವು ನೀಡು, ಅಲ್ಲೇ ದರ್ಶನ ಕೊಡುವೆ, ಹಸಿದ ಹೊಟ್ಟೆಗೆ ಅನ್ನ ನೀಡುವದು ಮುಖ್ಯ ಎಂದು ಬೋಧಿಸಿದ್ದಾರೆ ಎಂದು ಜ.ಬೂದೀಶ್ವರ ಮಹಾಸ್ವಾಮಿಗಳು ಅಭಿಪ್ರಾಯಪಟ್ಟರು.

## ವಿಶ್ವಗುರು ಬಸವಣ್ಣನವರ ಜಯಂತಿ




■ ವಿಜಯಸಾಕ್ಷಿ ಸುದ್ದಿ, ಗದಗ


ಕರ್ನಾಟಕ ರಕ್ಷಣಾ ವೇದಿಕೆಯ ಗದಗ ಜಿಲ್ಲಾ ಘಟಕದ ವತಿಯಿಂದ ವಿಶ್ವಗುರು ಬಸವಣ್ಣನವರ ಜಯಂತಿ ಅಂಗವಾಗಿ ನಗರದಲ್ಲಿರುವ ವಿಶ್ವಗುರು ಬಸವಣ್ಣನವರ ಪುತ್ಥಳಿಗೆ ಮಾಲಾರ್ಪಣೆ ನೆರವೇರಿಸಲಾಯಿತು.

ಮುಖಂಡರಾದ ನಿಂಗನಗೌಡ ಮಾಲಿಪಾಟೀಲ್ ಮಾತನಾಡಿ, ದಯವಿಲ್ಲದ ಧರ್ಮವದಾವುದಯ್ಯ, ದಯವೇ ಧರ್ಮದ ಮೂಲವಯ್ಯ ಎಂದು ಸಾರಿ, ವಚನ ಸಾಹಿತ್ಯಕ್ಕೆ ಚಳುವಳಿಯ ರೂಪ ಕೊಟ್ಟು ಸಾಮಾಜಿಕ ತಾರತಮ್ಯ, ಜಾತಿ ವ್ಯವಸ್ಥೆ, ಶೋಷಣೆ, ಮೂಢನಂಬಿಕೆಯ ವಿರುದ್ಧ ಸಮರ ಸಾರಿದ, ಶ್ರೇಷ್ಠ ಶಿವಶರಣ, ಕ್ರಾಂತಿಯೋಗಿ, ಜಗಜ್ಯೋತಿ ವಿಶ್ವಗುರು ಬಸವಣ್ಣನವರ ತತ್ವಾದರ್ಶಗಳು ಇಂದಿಗೂ ಪ್ರಸ್ತುತವಾಗಿದೆ ಎಂದು ಹೇಳಿದರು.

ಕರವೇ ತಾಲೂಕಾಧ್ಯಕ್ಷ ನಾಗಪ್ಪ ಅಣ್ಣಿಗೇರಿ, ಜಿಲ್ಲಾ ಯುವ ಮುಖಂಡರಾದ ಕುಮಾರ್ ರೇವಣ್ಣ, ಸರಸ್ವತಿ ನಾಗಪ್ಪ ಅಣ್ಣಿಗೇರಿ, ಗದಗ ತಾಲೂಕಾ ಸಾಮಾಜಿಕ ಜಾಲತಾಣದ ಸಂಚಾಲಕ ಮುಸ್ತಾಕ್ ದಾವಣಗೆರೆ, 34ನೇ ವಾರ್ಡ್ ಅಧ್ಯಕ್ಷ ನಾಗರಾಜ್ ಬಂಡಿ, ರವಿ ಮಲ್ನಾಡ್, ಮಹೇಶ್ ಗುಳೇದ್, ಜಾವೀದ್, ಎಂ.ಜಿ. ಅಸುಂಡಿ, ಗೋವರ್ಧನ್ ಪಾಟೀಲ ಮುಂತಾದವರು ಉಪಸ್ಥಿತರಿದ್ದರು.

## ದಾಭೋಲ್ಕರ್ ಪ್ರಕರಣ: ಜೀವಾವಧಿ ಶಿಕ್ಷೆಗೆ ಒಳಗಾದ ಅಪರಾಧಿ ಗೌರಿ ಲಂಕೇಶ್ ಹತ್ಯೆಯಲ್ಲೂ ಆರೋಪಿ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು



2013ರ ಆಗಸ್ಟ್‌ನಲ್ಲಿ ವಿಚಾರವಾದಿ ನರೇಂದ್ರ ದಾಭೋಲ್ಕರ್ ಅವರನ್ನು ಗುಂಡಿಕ್ಕಿ ಹತ್ಯೆಗೈದ 10 ವರ್ಷಗಳ ನಂತರ, ಪುಣೆಯ ವಿಶೇಷ ನ್ಯಾಯಾಲಯವು ಇಂದು ಇಬ್ಬರು ಆರೋಪಿಗಳನ್ನು ದೋಷಿಗಳೆಂದು ಘೋಷಿಸಿ, ಪ್ರಕರಣದ ಮಾಸ್ಟರ್‌ಮೈಂಡ್‌ಗಳನ್ನು ಖುಲಾಸೆಗೊಳಿಸಿದೆ. ಶಿಕ್ಷೆಗೊಳಗಾದ ವ್ಯಕ್ತಿಗಳಾದ ಸಚಿನ್ ಅಂದುರೆ ಮತ್ತು ಶರದ್ ಕಲಾಸ್ಕರ್ ದಾಭೋಲ್ಕರ್ ಮೇಲೆ ಗುಂಡು ಹಾರಿಸಿದ್ದರು.

ಅಪರಾಧಿಗಳಲ್ಲಿ ಒಬ್ಬನಾದ ಕಲಾಸ್ಕರ್, ಗೌರಿ ಲಂಕೇಶ್ ಹತ್ಯೆ ಪ್ರಕರಣದಲ್ಲಿ ಹತ್ತನೇ ಆರೋಪಿಯಾಗಿದ್ದಾನೆ. ಆದಾಗ್ಯೂ, ಪುಣೆಯ ವಿಶೇಷ ಯುಎಪಿಎ ನ್ಯಾಯಾಲಯವು ಇಎನ್‌ಟಿ ಶಸ್ತ್ರಚಿಕಿತ್ಸಕ ವೀರೇಂದ್ರಸಿನ್ಹ್ ತಾವ್ಡೆ ಅವರನ್ನು ಪ್ರಕರಣದಿಂದ ಖುಲಾಸೆಗೊಳಿಸಿದೆ., ಅವರನ್ನು ಕೊಲೆಯ "ಮುಖ್ಯ ಸಂಚುಕೋರ" ಎಂದು ಹೆಸರಿಸಲಾಯಿತು. ತಾವ್ಡೆ ಅವರು ಹಿಂದೂ ಜನ ಜಾಗೃತಿ ಸಮಿತಿಯ ಆಗಿನ "ಉಪ ಮುಖ್ಯ ಸಂಘಟಕ" ಆಗಿದ್ದರು. ಇದು ಸನಾತನ ಸಂಸ್ಥೆಯ ಕಟು ಹಿಂದುತ್ವದ ಉಗ್ರಗಾಮಿ ಗುಂಪು. ಈ ಗುಂಪುಗಳು ದಾಭೋಲ್ಕರ್ ಅವರ ಮೂಢನಂಬಿಕೆ ವಿರೋಧಿ ಆಂದೋಲನಗಳಿಂದ ಗುರಿಯಾಗಿಸಿಕೊಂಡಿದ್ದವು.

ಫೆಬ್ರವರಿ 2022 ರಲ್ಲಿ, ಪ್ರಕರಣದ ತನಿಖೆ ನಡೆಸುತ್ತಿರುವ ಸಿಬಿಐ ತಂಡವು ಬಾಂಬೆ ಹೈಕೋರ್ಟ್‌ಗೆ ತಿಳಿಸಿದ್ದು, ತಾವ್ಡೆ ಅವರ ಉದ್ದೇಶವು 'ಹಿಂದೂ-ವಿರೋಧಿ' ಮತ್ತು ಸನಾತನ ಸಂಸ್ಥೆಯ ಸಂಪ್ರದಾಯಗಳು ಮತ್ತು ನಂಬಿಕೆಗಳನ್ನು ವಿರೋಧಿಸುವ ಜನರನ್ನು ತೊಡೆದುಹಾಕುವುದಾಗಿತ್ತು. ಸೈದ್ಧಾಂತಿಕ ಭಿನ್ನಾಭಿಪ್ರಾಯಗಳಿಂದಾಗಿ ದಾಭೋಲ್ಕರ್ ಹತ್ಯೆಗೆ ಶಾರ್ಪ್ ಶೂಟರ್‌ಗಳನ್ನು ನೇಮಿಸಿದ್ದು ತಾವ್ಡೆ ಎಂದು ಸಿಬಿಐ ಹೇಳಿದೆ. ತಾವ್ಡೆ ಮತ್ತು ಅವರ ಗುಂಪು ಸನಾತನ ಸಂಸ್ಥೆಯ 'ಕ್ಷತ್ರ ಧರ್ಮ ಸಾಧನ' ಎಂಬ ಪವಿತ್ರ ಪುಸ್ತಕದ ಬೋಧನೆಗಳನ್ನು ಅನುಸರಿಸಿದೆ ಎಂದು ಸಿಬಿಐ ಹೇಳಿದೆ. ಇದು ಹಿಂದೂ ವಿರೋಧಿಗಳನ್ನು ಹೇಗೆ ಎದುರಿಸಬೇಕೆಂದು ಅವರಿಗೆ ಕಲಿಸಿತು.

ತಾವ್ಡೆ ಜೊತೆಗೆ, ವಿಕ್ರಮ್ ಭಾವೆ ಮತ್ತು ಸಂಜೀವ್ ಪುನಾಲೇಕರ್ ಕೂಡ "ಸಾಕ್ಷ್ಯಾಧಾರಗಳ ಕೊರತೆ" ಯಿಂದ ಖುಲಾಸೆಗೊಂಡರು. ದಾಭೋಲ್ಕರ್ ಅವರ ಹತ್ಯೆಯು ಫೆಬ್ರವರಿ 2015 ರಲ್ಲಿ ಎಡಪಂಥೀಯ ನಾಯಕ ಗೋವಿಂದ್ ಪನ್ಸಾರೆ, 2015 ರ ಆಗಸ್ಟ್‌ನಲ್ಲಿ ಎಂಎಂ ಕಲ್ಬುರ್ಗಿ ಮತ್ತು ಸೆಪ್ಟೆಂಬರ್ 2017 ರಲ್ಲಿ ಪತ್ರಕರ್ತೆ ಮತ್ತು ಹೋರಾಟಗಾರ್ತಿ ಗೌರಿ ಲಂಕೇಶ್ ಅವರಂತಹ ಹಲವಾರು ಇತರ ವಿಚಾರವಾದಿಗಳ ಉದ್ದೇಶಿತ ಹತ್ಯೆಗಳ ಸರಣಿಯನ್ನು ಹುಟ್ಟುಹಾಕಿತು.

## ತೋಂಟದಾರ್ಯ ತಾಂತ್ರಿಕ ಮಹಾವಿದ್ಯಾಲಯದಲ್ಲಿ 'ಟಿ.ಸಿ.ಇ ಹ್ಯಾಕಥಾನ್-2024'

■ ವಿಜಯಸಾಕ್ಷಿ ಸುದ್ದಿ, ಗದಗ

ಇಂಜಿನಿಯರಿಂಗ್ ವಿದ್ಯಾರ್ಜನೆ ಮಾಡುವ ವಿದ್ಯಾರ್ಥಿಗಳಲ್ಲಿ ವಿಶಿಷ್ಟವಾದ ತಾಂತ್ರಿಕ ಮತ್ತು ತಾರ್ಕಿಕ ಚಿಂತನೆ ಮಾಡುವ ಗುಣವಿರುತ್ತದೆ. ಅದನ್ನು ಬಳಸಿಕೊಂಡು ದೇಶಕ್ಕೆ ಉತ್ತಮೋತ್ತಮ ಕೊಡುಗೆಗಳನ್ನು ನೀಡಬೇಕು ಎಂದು ಡಾ. ಎಂ.ಎಂ. ಅವಟಿ ನುಡಿದರು.

ತೋಂಟದಾರ್ಯ ತಾಂತ್ರಿಕ ಮಹಾವಿದ್ಯಾಲಯ ಕಂಪ್ಯೂಟರ್ ಸೈನ್ಸ್ ವಿಭಾಗ ಮತ್ತು ಕಂಪ್ಯೂಟರ್ ಸೈನ್ಸ್ ಡಿಸೈನ್ ವಿಭಾಗ ಮತ್ತು ಐಸೆಕ್ ಸೈಬರ್ ಸೆಕ್ಯುರಿಟಿ ಸೊಲ್ಯುಶನ್ಸ್ ಬೆಳಗಾವಿ ಇವುಗಳ ಸಹಯೋಗದೊಂದಿಗೆ ಹಮ್ಮಿಕೊಂಡಿದ್ದ 'ಟಿ.ಸಿ.ಇ. ಹ್ಯಾಕಥಾನ್-2024' ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಅತಿಥಿಗಳಾಗಿ ಪಾಲ್ಗೊಂಡಿದ್ದ ಐಸೆಕ್ ಕಂಪನಿಯ ಗಜೇಂದ್ರ ದೇಶಪಾಂಡೆ, ವಿದ್ಯಾಧೀಶ ಪಾಂಡುರಂಗಿ ಮಾತನಾಡಿ, ಇಂದಿನ ದಿನಗಳಿಗನುಸಾರವಾಗಿ ತಾಂತ್ರಿಕ ಸಮಸ್ಯೆಗಳ ಮೂಲವನ್ನು ಕಂಡುಕೊಂಡು ಅದಕ್ಕೆ ಅನುಗುಣವಾಗಿ ತಾಂತ್ರಿಕ ಉಪಾಯಗಳನ್ನು ಹುಡುಕುವುದು ಇಂಜಿನಿಯರ್‌ಗಳಿಗೆ ಸವಾಲಿನ ಕೆಲಸವಾಗಿದೆ. ಅದನ್ನು ತಾಂತ್ರಿಕ ಕೌಶಲ್ಯಗಳ ಮೂಲಕ ಹೇಗೆ ಪರಿಹರಿಸಬೇಕು ಎನ್ನುವುದನ್ನು ಇಂತಹ ಕಾರ್ಯಕ್ರಮಗಳಿಂದ ವಿದ್ಯಾರ್ಥಿಗಳಿಗೆ ಸುಲಭವಾಗಿ ತಿಳಿಸಿಕೊಡಬಹುದು ಎಂದರು.

ಬೆಳಗಾವಿಯ ಗೋಗಟೆ ಇನ್ಸ್ಟಿಟ್ಯೂಟ್ ಆಫ್ ಟೆಕ್ನೋಲಜಿ ಪ್ರಥಮ ಬಹುಮಾನವಾಗಿ 15 ಸಾವಿರ ರೂ ಹಾಗೂ ದ್ವಿತೀಯ ಬಹುಮಾನವಾಗಿ 10 ಸಾವಿರ ರೂಪಾಯಿಗಳ ನಗದು ಬಹುಮಾನವನ್ನು ತನ್ನದಾಗಿಸಿಕೊಂಡಿತು. ಮೂರನೆಯ ಬಹುಮಾನವಾಗಿ 5 ಸಾವಿರ ರೂ. ನಗದು ಬಹುಮಾನವನ್ನು ಹುಬ್ಬಳ್ಳಿಯ ಜೈನ್ ಕಾಲೇಜ್ ಆಫ್ ಇಂಜಿನಿಯರಿಂಗ್ ಮತ್ತು ಸಂಶೋಧನಾ ಕೇಂದ್ರ ಮತ್ತು ಬೆಂಗಳೂರಿನ ಆರ್.ವಿ. ಕಾಲೇಜ್ ಪಡೆದುಕೊಂಡಿತು.

ವೇದಿಕೆಯ ಮೇಲೆ ಕಂಪ್ಯೂಟರ್ ಸೈನ್ಸ್ ವಿಭಾಗದ ಮುಖ್ಯಸ್ಥ ಡಾ. ರಮೇಶ ಬಡಿಗೇರ, ಕಂಪ್ಯೂಟರ್ ಸೈನ್ಸ್ ಮತ್ತು ಡಿಸೈನ್ ವಿಭಾಗದ ಮುಖ್ಯಸ್ಥ ಪ್ರೊ. ವಿಜಯಕುಮಾರ ಮಾಲಗತ್ತಿ ಉಪಸ್ಥಿತರಿದ್ದರು. ಕಾರ್ಯಕ್ರಮದ ಸಂಚಾಲಕಿ ಪ್ರೊ. ತೃಪ್ತಿ ಕುರಡಗಿ, ಪ್ರೊ. ಅಧೋಕ್ಷಜಾ ಕುಲಕರ್ಣಿ, ಮಾರ್ಗದರ್ಶಕರಾದ ಡಾ. ಶರ್ವಾಣಿ ಉಪಸ್ಥಿತರಿದ್ದರು. ಎಲ್ಲ ವಿಭಾಗದ ಮುಖ್ಯಸ್ಥರು, ಉಪನ್ಯಾಸಕರು, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ವಿದ್ಯಾರ್ಥಿ ಸಂಚಾಲಕರಾದ ನಂದೀಶ, ಚನ್ನವೀರ, ಫಕ್ರುದ್ದೀನ್ ಸಹಕರಿಸಿದರು.






ಗದಗ: ಬಿಜೆಪಿ ಗದಗ ಜಿಲ್ಲಾ ಘಟಕದ ವತಿಯಿಂದ ನಗರದ ಬಸವೇಶ್ವರ ಸರ್ಕಲ್‌ನಲ್ಲಿರುವ ಬಸವೇಶ್ವರ ಪುತ್ಥಳಿಗೆ ಜಿಲ್ಲಾ ಬಿಜೆಪಿ ಪ್ರಮುಖರು ಮಾಲಾರ್ಪಣೆ ಮಾಡಿದರು. ಈ ಸಂದರ್ಭದಲ್ಲಿ ವಿ.ಪ ಸದಸ್ಯ ಎಸ್.ವ್ಹಿ. ಸಂಕನೂರ, ಜಿಲ್ಲಾಧ್ಯಕ್ಷ ರಾಜು ಕುರುಡಗಿ, ಜಿಲ್ಲಾ ವಕ್ತಾರ ಎಂ.ಎಂ. ಹಿರೇಮಠ, ಹಿರಿಯರಾದ ಎಂ.ಎಸ್. ಕರೀಗೌಡ್ರ, ಸಿದ್ದು ಪಲ್ಲೇದ, ಅಶೋಕ ಸಂಕಣ್ಣವರ, ನಗರಾಧ್ಯಕ್ಷ ಅನಿಲ ಅಬ್ಬಿಗೇರಿ, ಭೀಮಸಿಂಗ ರಾಠೋಡ, ಕೆ.ಕೆ. ಮಳಗೌಡ್ರ, ಕೆ.ಪಿ. ಕೊಟಿಗೌಡ್ರ, ರಾಘವೇಂದ್ರ ಯಳವತ್ತಿ, ಸುಧೀರ ಕಾಟಿಗರ, ಮಂಜುನಾಥ ಶಾಂತಗೇರಿ, ಸಂತೋಷ ಅಕ್ಕಿ, ರಾಜೇಶ ಕಟ್ಟಿಮನಿ, ಸಂತೋಷ ಕಲ್ಯಾಣಿ, ವಿಶ್ವನಾಥ ಶಿರಿಗಣ್ಣವರ, ಎಸ್.ಕೆ. ಉಮಚಗಿ, ರಮೇಶ ಸಜ್ಜಗಾರ, ರವಿ ಮಾನ್ವಿ, ಮಾಂತೇಶ ಬಾತಾಖಾನಿ, ಶಾಂತೇಶ ಚವಡಿ, ಯೋಗೇಶ್ವರಿ ಭಾವಿಕಟ್ಟಿ, ವಿನೋದ ಹಂಸನೂರ ಮುಂತಾದವರಿದ್ದರು.

## ಸಂಭ್ರಮದ ಶ್ರೀ ದುರ್ಗಾದೇವಿ ಮಹಾ ರಥೋತ್ಸವ

■ ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ತಿಮ್ಮಾಪೂರ ಗ್ರಾಮದಲ್ಲಿ ಮೂರು ವರ್ಷಕ್ಕೊಮ್ಮೆ ಜರುಗುವ ಶ್ರೀ ದುರ್ಗಾದೇವಿ ಜಾತ್ರೆ ಸಾವಿರಾರು ಭಕ್ತರ ಸಮ್ಮುಖದಲ್ಲಿ ವಿಜೃಂಭಣೆಯಿಂದ ನೆರವೇರಿತು.

ಜಾತ್ರಾ ಮಹೋತ್ಸವದ ಹಿನ್ನೆಲೆಯಲ್ಲಿ ಬೆಳಿಗ್ಗೆ ದುರ್ಗಾ ದೇವಿ ಪೂಜಾರಿಗಳಿಂದ ಅಗ್ನಿ ಕುಂಡ ಪ್ರವೇಶ ಕಾರ್ಯಕ್ರಮ ನಡೆಯಿತು. ರಥೋತ್ಸವದ ಪ್ರಯುಕ್ತ ದೇವಿಗೆ ವಿಶೇಷ ಜಲಾಭಿಷೇಕ, ಅಲಂಕಾರ ನೆರವೇರಿಸಲಾಯಿತು. ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಕಲ ಮಂಗಳ ವಾದ್ಯಗಳ ಮೂಲಕ ಮೆರವಣಿಗೆ



ಸಂಚರಿಸಿತು. ಮಧ್ಯಾಹ್ನ ಸರ್ವ ಧರ್ಮ ಸಾಮೂಹಿಕ ವಿವಾಹ ನಡೆಯಿತು.

## ಬಸವಣ್ಣನವರ ತತ್ವ-ಸಿದ್ಧಾಂತ ಆದರ್ಶಪ್ರಾಯ



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಬಸವಣ್ಣನವರು ಪ್ರತಿಪಾದಿಸಿದ ತತ್ವ-ಸಿದ್ಧಾಂತಗಳು ಇಂದಿಗೂ ವಿಶ್ವದಲ್ಲಿ ಆದರ್ಶಪ್ರಾಯವಾಗಿವೆ ಎಂದು ಪ್ರಾಚಾರ್ಯ ಆರ್.ಎಂ. ಕಲ್ಲನಗೌಡರ ಹೇಳಿದರು.

ಅವರು ಪಟ್ಟಣದ ಆರ್.ಎನ್. ದೇಶಪಾಂಡೆ ಸರಕಾರಿ ಪ್ರಥಮದರ್ಜೆ ಕಾಲೇಜಿನಲ್ಲಿ ಬಸವ ಜಯಂತಿ ನಿಮಿತ್ತ ಬಸವಣ್ಣನವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿ, ಪ್ರತಿಯೊಬ್ಬ ವ್ಯಕ್ತಿಯೂ ಬಸವಣ್ಣನವರು ಪ್ರತಿಪಾದಿಸಿದ ಸಮಾನತೆ, ಸಹೋದರತ್ವ, ಅನ್ನದಾಸೋಹ, ಕೆಳವರ್ಗದ ಜನರನ್ನು ಮೇಲೆತ್ತುವ ಹಾದಿಯಲ್ಲಿ ಸಾಗಬೇಕು. ಇಂದಿನ ಯುವ ಪೀಳಿಗೆ ಬಸವಣ್ಣನವರ ತತ್ವಾದರ್ಶಗಳನ್ನು ನಿತ್ಯ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಉಪನ್ಯಾಸಕರಾದ ಪ್ರಸನ್ನ ಎಸ್, ಅನುಪಮಾ, ಜಾನಕಿ ಮರಾಠೆ, ಕೆ.ಎನ್. ಕಡೆಮನಿ, ಕೆ.ಎಂ. ಶಿರೂರ, ಡಾ.ಬಾರಕೇರ ಹಾಗೂ ಕಾಲೇಜಿನ ಬೋಧಕ, ಬೋಧಕೇತರ ಸಿಬ್ಬಂದಿಗಳು ಇದ್ದರು.

## ಸೌಜನ್ಯ ಶಿಡ್ಲಣ್ಣವರ ಜಿಲ್ಲೆಗೆ ದ್ವಿತೀಯ ಸ್ಥಾನ




■ ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಲಿಂಗಧಾಳ ಸರಕಾರಿ ಪ್ರೌಢಶಾಲೆಯ 2023-24ನೇ ಸಾಲಿನ ಎಸ್‌ಎಸ್‌ಎಲ್‌ಸಿ ಫಲಿತಾಂಶ ಶೇ.65.21 ಆಗಿದ್ದು, ಸೌಜನ್ಯ ಶಿಡ್ಲಣ್ಣವರ ಶೇ. 96.8 ಅಂಕಗಳೊಂದಿಗೆ ಜಿಲ್ಲೆಗೆ ದ್ವಿತೀಯ ಸ್ಥಾನ ಹಾಗೂ ಶಾಲೆಗೆ ಪ್ರಥಮ ಸ್ಥಾನ, ದ್ವಿತೀಯ ಸ್ಥಾನ ಕೀರ್ತಿ ಲಿಂಗನಗೌಡ್ರ ಶೇ. 92.6, ತೃತೀಯ ಸ್ಥಾನ ದೇವರಾಜ ಗೋನಾಳ ಶೇ. 87.5 ಪಡೆದು ಶಾಲೆಗೆ ಕೀರ್ತಿ ತಂದಿದ್ದಾರೆ.

ಸುಕನ್ಯಾ ತೋರುಗಲ್ ಶೇ. 83.68, ಸ್ಪಂದನ ನವಲಗುಂದ ಶೇ. 82.56 ಉನ್ನತ ದರ್ಜೆಯಲ್ಲಿ ತೇರ್ಗಡೆ ಹೊಂದಿ ಸಾಧನೆಗೈದಿದ್ದಾರೆ. ಗ್ರಾಮ ಪಂಚಾಯಿತಿ ಅಧ್ಯಕ್ಷ ಪ್ರದೀಪ್ ಕುಮಾರ್ ನವಲಗುಂದ ಹಾಗೂ ಸದಸ್ಯರು, ಶಾಲಾ ಎಸ್‌ಡಿಎಂಸಿ ಅಧ್ಯಕ್ಷ ಉಮೇಶ್ ಗುಳೇದ,ಸದಸ್ಯರು, ಮುಖ್ಯೋಪಾಧ್ಯಾಯರಾದ ಪಿ.ಎಸ್. ಸಜ್ಜನ, ಶಿಕ್ಷಕರಾದ ಆರ್.ಎಂ. ಬಿಂಗಿ, ಎಸ್.ಬಿ. ಭಜಂತ್ರಿ, ಆರ್.ವಿ. ಮ್ಯಾಗೇರಿ, ಎಸ್.ಕೆ. ಹಗರಣ್ಣವರ, ಎ.ಟಿ. ಮೇಗಡಿ, ಎಸ್.ವಿಜಯಾ, ಎನ್. ಎಸ್. ಕುರುಬನಾಳ, ಜೆ.ವಿ. ಹಿರೇಮಠ, ಕೆ.ವಿ. ಹಿರೇಮಠ, ಜೆ.ಐ. ಕುನ್ನೂರ, ಎಂ.ಎಂ. ಹುಡೇದ ಹಾಗೂ ಗ್ರಾಮದ ಗುರು-ಹಿರಿಯರು ವಿದ್ಯಾರ್ಥಿಗಳನ್ನು ಅಭಿನಂದಿಸಿದ್ದಾರೆ.

## ಅರವಿಂದ್ ಕೇಜ್ರಿವಾಲ್‌ಗೆ ಸುಪ್ರೀಂ ಕೋರ್ಟ್‌ನಿಂದ ಮಧ್ಯಂತರ ಜಾಮೀನು

■ ವಿಜಯಸಾಕ್ಷಿ ಸುದ್ದಿ, ನವದೆಹಲಿ



ಆಪಾದಿತ ಅಬಕಾರಿ ನೀತಿ ಹಗರಣದ ಹಣ ಅಕ್ರಮ ವರ್ಗಾವಣೆ ಪ್ರಕರಣದಲ್ಲಿ ಜಾರಿ ನಿರ್ದೇಶನಾಲಯ (ಇಡಿ)ದಿಂದ ಬಂಧಿತರಾಗಿರುವ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರಿಗೆ ಸುಪ್ರೀಂ ಕೋರ್ಟ್ ಇಂದು (ಮೇ 10) ಮಧ್ಯಂತರ ಜಾಮೀನು ಮಂಜೂರು ಮಾಡಿದೆ.

ಸಂಜೆಯೊಳಗೆ ವಿವರವಾದ ಆದೇಶವನ್ನು ಅಪ್ಲೋಡ್ ಮಾಡಲಾಗುವುದು ಎಂದು ನ್ಯಾಯಮೂರ್ತಿಗಳಾದ ಸಂಜೀವ್ ಖನ್ನಾ ಮತ್ತು ದೀಪಂಕರ್ ದತ್ತಾ ಅವರ ಪೀಠ ಹೇಳಿದೆ.

ಅಬಕಾರಿ ನೀತಿ ಹಗರಣ ಸಂಬಂಧ ಆಗಸ್ಟ್ 2022ರಲ್ಲಿ ಪ್ರಕರಣ ದಾಖಲಿಸಲಾಗಿತ್ತು. ಆದರೆ, ಕೇಜ್ರಿವಾಲ್ ಅವರನ್ನು ಸುಮಾರು ಒಂದೂವರೆ ವರ್ಷಗಳ ನಂತರ 21 ಮಾರ್ಚ್ 2024 ರಲ್ಲಿ ಬಂಧಿಸಿರುವುದನ್ನು ಪೀಠ ಗಮನಿಸಿದೆ.

ಚುನಾಯಿತ ಮುಖ್ಯಮಂತ್ರಿಯ ಪ್ರಕರಣದ ವಿಚಾರಣೆ ನಡೆಯುತ್ತಿದೆ, ಸಾಮಾನ್ಯ ವ್ಯಕ್ತಿಯದ್ದಲ್ಲ. ಸಾರ್ವತ್ರಿಕ ಚುನಾವಣೆ 5 ವರ್ಷಗಳಿಗೊಮ್ಮೆ ನಡೆಯುತ್ತದೆ ಎಂಬ ಅಂಶಗಳನ್ನೂ ಪೀಠ ಗಮನಿಸಿದೆ. ಮೇ 7ರಂದು ವಿಚಾರಣೆ ನಡೆಸಿದ್ದ ಪೀಠ, ಕೇಜ್ರಿವಾಲ್ ಅವರಿಗೆ ಮಧ್ಯಂತರ ಜಾಮೀನು ದೊರೆತರೂ, ಅಧಿಕೃತ ಕರ್ತವ್ಯಗಳನ್ನು ನಿರ್ವಹಿಸಲು ಅನುಮತಿಸುವುದಿಲ್ಲ ಎಂದು ಮೌಖಿಕವಾಗಿ ಹೇಳಿತ್ತು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka